ಸಂಪುಟ : 9 ಸಂಚಿಕೆ 63 ಪುಟ : 4 ಬೆಲೆ: 3.00 ಮಂಗಳವಾರ ಎಪ್ರಿಲ್ 9 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 63 Pages : 4 Price : 3.00 Tuesday April 9 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಯುಗಾದಿ ಹಬ್ಬದ ಶುಭಾಶಯ



ವಿಜಯಸಾಕ್ಷಿ ಪತ್ರಿಕೆಯ ಓದುಗರು, ಜಾಹೀರಾತುದಾರರು, ಪ್ರತಿನಿಧಿಗಳು ಹಾಗೂ ಹಿತೈಷಿಗಳಿಗೆ ಯುಗಾದಿ ಹಬ್ಬದ ಹಾರ್ದಿಕ ಶುಭಾಶಯಗಳು. ಈ ಯುಗಾದಿ ಹಬ್ಬ ಹಾಗೂ ಹೊಸ ವರ್ಷವು ಎಲ್ಲರಿಗೂ ಒಳಿತನ್ನು ತರಲಿ ಎಂದು ಆಶಿಸುತ್ತೇವೆ.

–ಸಂಪಾದಕರು

## ಬಿಡುವು

ಚಾಂದ್ರಮಾನ ಯುಗಾದಿ ಹಬ್ಬದ ಪ್ರಯುಕ್ತ ಮಂಗಳವಾರ (ಏ. 9 ರಂದು) ವಿಜಯಸಾಕ್ಷಿ ಕಚೇರಿಗೆ ಬಿಡುವು ಇರುತ್ತದೆ. ಕಾರಣ ಬುಧವಾರ ಮಾ.10ರ ಸಂಚಿಕೆ ಪ್ರಕಟವಾಗುವುದಿಲ್ಲ.

## ಎಪ್ರಿಲ್ 10ರಿಂದ ನಾನ್ ಎ ಸಿ ಸ್ಲೀಪರ್ ವಾಹನ ಕಾರ್ಯಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 10 ರಿಂದ ನಾನ್ ಎ ಸಿ ಸ್ಲೀಪರ್ ವಾಹನ ಕಾರ್ಯಾಚರಣೆ ಪ್ರಾರಂಭ ಮಾಡುತ್ತಿದ್ದು ಈ ಸಾರಿಗೆ ರಾತ್ರಿ 9.45 ಕ್ಕೆ ಮುಂಡರಗಿ– ಹಡಗಲಿ–ಚಿತ್ರದುರ್ಗ ಮಾರ್ಗವಾಗಿ ಬೆಂಗಳೂರಿಗೆ ಹಾಗೂ ಬೆಂಗಳೂರಿನಿಂದ ಸಮಯ ರಾತ್ರಿ 9.45 ಕ್ಕೆ ಸದರಿ ಮಾರ್ಗದಲ್ಲಿ ಕಾರ್ಯಾಚರಣೆಗೊಳ್ಳುತ್ತಿದೆ. ಸಾರ್ವಜನಿಕರು ವಾಹನ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಲು ವಾ.ಕ.ರ.ಸಾ.ಸಂಸ್ಥೆಯ ಗದಗ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತುಂಗಭದ್ರಾ ನದಿ ನೀರು ಪೂರೈಕೆ, ಪೈಪ್‌ಲೈನ್ ರಿಪೇರಿಗಾಗಿ ಸಹಾಯವಾಣಿ ಕೇಂದ್ರ

■ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದ ಸಾರ್ವಜನಿಕರ ಅನುಕೂಲಕ್ಕಾಗಿ ಗದಗ ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ತುಂಗಭದ್ರಾ ನದಿ ನೀರು ಪೂರೈಕೆ ಮತ್ತು ಪೈಪ್‌ಲೈನ್ ರಿಪೇರಿಗಾಗಿ ಹಾಗೂ ಟ್ಯಾಂಕರ್ ಮೂಲಕ ನೀರು ಪೂರೈಕೆಗಾಗಿ ನಗರಸಭೆಯಲ್ಲಿ ಸಹಾಯವಾಣಿ ಕೇಂದ್ರ ತೆರೆಯಲಾಗಿದೆ. ಅದರ ದೂ.ಸಂ. 08372–278504ಗೆ ಸಂಪರ್ಕಿಸಬಹುದಾಗಿದೆ ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ತೋಂಟದಾರ್ಯ ಮಠದ ತೇರಿನ ಗಾಲಿ ಪೂಜೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದಲ್ಲಿ ಐತಿಹಾಸಿಕ ಮತ್ತು ಪುರಾತನ ಹಿನ್ನೆಲೆಯುಳ್ಳ ಶ್ರೀ ಜಗದ್ಗುರು ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವದ ನಿಮಿತ್ತ ತೇರಿನ ಗಾಲಿ ಪೂಜಾ ಕಾರ್ಯಕ್ರಮ ಏ.9ರ ಸಾಯಂಕಾಲ 6 ಗಂಟೆಗೆ ಪರಮಪೂಜ್ಯ ಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರ ಸನ್ನಿಧಿಯಲ್ಲಿ ನೇರವೇರುವುದು.

ಈ ಪೂಜಾ ಕಾರ್ಯಕ್ರಮದಲ್ಲಿ ಶ್ರೀ ಸ್ವಾಮಿ ಸಿದ್ಧಲಿಂಗೇಶ್ವರರ ಭಕ್ತರು, ಶ್ರೀಮಠದ ಅಭಿಮಾನಿಗಳು, ಜಾತ್ರಾ ಸಮಿತಿಯ ಪದಾಧಿಕಾರಿಗಳು ಹಾಗೂ ಉಪಸಮಿತಿಗಳ ಪದಾಧಿಕಾರಿಗಳು, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರು–ಸರ್ವ ಸದಸ್ಯರು, ಬಸವದಳ, ಬಸವಕೇಂದ್ರ, ಸರ್ವ ಸದ್ಭಕ್ತ ಮಹಾಜನತೆ ಉಪಸ್ಥಿತರಿರಲು ತೋಂಟ–ದಾರ್ಯ ಜಾತ್ರಾಮಹೋತ್ಸವ ಸಮಿತಿ ಅಧ್ಯಕ್ಷರಾದ ಡಾ. ಕೆ.ಎಚ್. ಬೇಲೂರ ಹಾಗೂ ಸರ್ವ ಪದಾಧಿಕಾರಿಗಳು ವಿನಂತಿಸಿದ್ದಾರೆ.

### ಲಕ್ಷ್ಮೇಶ್ವರ ತಾಲೂಕು ವ್ಯಾಪ್ತಿಯ ಗ್ರಾಮಗಳಲ್ಲಿ ಚುನಾವಣಾ ಪ್ರಚಾರ ಕೈಗೊಂಡ ಬಸವರಾಜ ಬೊಮ್ಮಾಯಿ

# ಕ್ಷೇತ್ರದ ಸಮಗ್ರ ಅಭಿವೃದ್ಧಿ ನನ್ನ ಕನಸು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶದ ಸಮರ್ಥ ಪ್ರಧಾನಿ ನರೇಂದ್ರ ಮೋದಿಯವರು ಭಯೋತ್ಪಾದಕ–ರಿಂದ ದೇಶದ ರಕ್ಷಣೆ, ಭ್ರಷ್ಟಾಚಾರ ರಹಿತ ಆಡಳಿತ, ರೈತರು ಹಾಗೂ ಎಲ್ಲ ವರ್ಗದ ಜನರ ಕಲ್ಯಾಣ ಸೇರಿದಂತೆ ದೇಶದ ಸರ್ವತೋಮುಖ ಅಭಿವೃದ್ಧಿಗೆ, ಜನತೆಯ ಬದುಕಿನ ಭದ್ರತೆಗೆ ಗ್ಯಾರಂಟಿಯಾಗಿದ್ದಾರೆ. ಕೇಂದ್ರ ಸರಕಾರ ಆಶ್ರಯ ಮನೆ, ಶೌಚಾಲಯ, ಅಡುಗೆ ಸಿಲಿಂಡರ್, ಜಲಜೀವನ ಮಷಿನ್ ಇತ್ಯಾದಿ ಯೋಜನೆಗಳು ಜನರಿಗೆ ಗ್ಯಾರಂಟಿಗಳಾಗಿವೆ. ನಾವೆಲ್ಲ ಭಾರತ ಮಾತೆಯ ಮಕ್ಕಳು, ಭಾರತ ಮಾತೆಯ ಸೇವೆ ಮಾಡೋಣ ಎಂದು ಮಾಜಿ ಸಿಎಂ, ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಕರೆ ನೀಡಿದರು.

ಅವರು ಸೋಮವಾರ ಲಕ್ಷ್ಮೇಶ್ವರ ತಾಲೂಕು ವ್ಯಾಪ್ತಿಯ ಬಸಾಪೂರ, ರಾಮಗಿರಿ, ಶಿಗ್ಲಿ, ದೊಡ್ಡೂರು, ಸೂರಣಗಿ, ಬಾಲೇಹೊಸೂರು ಗ್ರಾಮಗಳಲ್ಲಿ ಚುನಾವಣೆ ಪ್ರಚಾರ ಕೈಗೊಂಡು ಮಾತನಾಡಿದರು.

ತಮ್ಮ ತಂದೆಯ ಕಾಲದಿಂದಲೂ ಶಿಗ್ಲಿ ಗ್ರಾಮದೊಂದಿಗೆ ಉತ್ತಮ ಬಾಂಧವ್ಯವಿದೆ. ರಾಜಕೀಯವಾಗಿ ಬಹಳಷ್ಟು ಪ್ರಜ್ಞೆ ಇರುವ ಗ್ರಾಮವಿದು. ನಮ್ಮ ತಂದೆಯವರ ವಿಶೇಷ ಅಧಿಕಾರಿಯಾಗಿ ಕಾರ್ಯ ನಿರ್ವಹಿಸಿದ ವಿ.ಪಿ. ಬಳಿಗಾರ ಅವರು ದಕ್ಷ ಅಧಿಕಾರಿಯಾಗಿದ್ದರು ಎಂದು ಸ್ಮರಿಸಿದರು. ತಮ್ಮ ಅವಧಿಯಲ್ಲಿ ರೈತರ ಮಕ್ಕಳಿಗೆ ನೀಡಿದ ವಿದ್ಯಾನಿಧಿ ಯೋಜನೆಯಿಂದ 13 ಲಕ್ಷ ರೈತರ ಮಕ್ಕಳಿಗೆ ಅನಕೂಲವಾಗಿದೆ. ಕಿಸಾನ ಸಮ್ಮಾನ ಯೋಜನೆ, ಸಂಧ್ಯಾ ಸುರಕ್ಷಾ, ಅಂಗವಿಕಲರಿಗೆ ಮಾಶಾಸನ ಹೆಚ್ಚಳ, ಅಂಗನವಾಡಿ ಕಾರ್ಯಕರ್ತರಿಗೆ, ಸಹಾಯಕಿಯರಿಗೆ ಗೌರವಧನದಲ್ಲಿ ಹೆಚ್ಚಳ ಮಾಡಲಾಗಿತ್ತು. ಹಾವೇರಿ ಮತಕ್ಷೇತ್ರದ ಬೇಕು–ಬೇಡಿಕೆಗಳ ಅರಿವಿದ್ದು, ಕ್ಷೇತ್ರದ ಸಮಗ್ರ ಅಭಿವೃದ್ಧಿ ಕನಸು ಹೊಂದಿದ್ದೇನೆ.



ಬಿಜೆಪಿಗೆ ಮತ ನೀಡಿ ನರೇಂದ್ರ ಮೋದಿಯವರ ಕೈ ಬಲಪಡಿಸಿ ಎಂದರು.

ಕಾರ್ಯಕ್ರಮದಲ್ಲಿ ಶಾಸಕ ಸಿ.ಸಿ. ಪಾಟೀಲ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ, ಸಣ್ಣೀರಪ್ಪ ಹಳ್ಳೆಪ್ಪನವರ, ಸೋಮಣ್ಣ ಡಾಣಗಲ್, ಡಿ.ವೈ. ಹುನಗುಂದ, ಬಿ.ಡಿ. ಪಲ್ಲೇದ, ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಪ್ರವೀಣ ಬಾಳಿಕಾಯಿ, ಶಕ್ತಿ ಕತ್ತಿ, ಅನಿಲ ಮುಳಗುಂದ, ಬಸವರಾಜ ಚಕ್ರಸಾಲಿ, ದುಂಡೇಶ ಕೊಟಗಿ, ಗಂಗಾಧರ ಮೆಣಸಿನಕಾಯಿ, ನಿಂಗಪ್ಪ ಬನ್ನಿ, ಎಂ.ಎಸ್. ದೊಡ್ಡಗೌಡ್ರ,

▶▶ 3ನೇ ಪುಟಕ್ಕೆ

ಪಾಕಿಸ್ತಾನದ ಜನರು ಕೂಡ ನರೇಂದ್ರ ಮೋದಿಯವರು ನಮ್ಮ ದೇಶದ ಪ್ರಧಾನಿಯಾದಬೇಕು ಎಂದು ಮನವಿ ಮಾಡುತ್ತಾರೆ. ಇಡೀ ವಿಶ್ವವೇ ಅವರ ಆಡಳಿತ ವೈಖರಿ ಮೆಚ್ಚಿದೆ, ಇದನ್ನು ಎಲ್ಲರೂ ಅರ್ಥೈಸಿಕೊಳ್ಳಬೇಕು. ಕಬಡ್ಡಿ ಅಖಾಡದಲ್ಲಿ ಎದುರಿಗೆ ಆಟವಾಡಲು ಆಟಗಾರರೇ ಇಲ್ಲ. ನಮ್ಮ ಕಡೆ ಮೋದಿಯವರನ್ನು ಪ್ರಧಾನಮಂತ್ರಿ ಅಭ್ಯರ್ಥಿ ಎಂದು ಘೋಷಿಸಿದ್ದೇವೆ. ಆದರೆ ಪ್ರತಿಪಕ್ಷದಲ್ಲಿ ಪ್ರಧಾನಿ ಅಭ್ಯರ್ಥಿಯೇ ಇಲ್ಲ.

– ಬಸವರಾಜ ಬೊಮ್ಮಾಯಿ.
ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ.



### ಶ್ರೀಮತಿ ಪಾರ್ವತಮ್ಮ ಮೆಣಸಿಗಿಯವರ ಪುಣ್ಯ ಸ್ಮರಣೋತ್ಸವದಲ್ಲಿ ಮುಪ್ಪಿನ ಬಸವಲಿಂಗಶ್ರೀಗಳು

# ದಾನಿಗಳ ದಿನಾಚರಣೆಯನ್ನು ಸಂಸ್ಥೆಗಳೇ ಆಚರಿಸಬೇಕು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಂಸ್ಥೆಗಳಿಗೆ ದಾನಿಗಳೇ ಜೀವಾಳ. ಅವರ ದಿನಾಚರಣೆಯನ್ನು, ಸ್ಮರಣೋತ್ಸವವನ್ನು ಸಂಸ್ಥೆಗಳೇ ಆಚರಿಸಬೇಕು. ಅಂದಾಗ ಮಾತ್ರ ಅದಕ್ಕೊಂದು ಅರ್ಥ, ದಾನಿಗಳಿಗೊಂದು ಗೌರವ ದೊರಕುತ್ತದೆ. ಮುಂದಿನ ವರ್ಷದಿಂದ ಪಾರ್ವತಮ್ಮ ಮೆಣಸಗಿಯವರ ಪುಣ್ಯ ಸ್ಮರಣೋತ್ಸವವನ್ನು ಸಂಸ್ಥೆಯಿಂದಲೇ ಆಚರಿಸುವ ಸಿದ್ಧತೆಯನ್ನು ಮಾಡಿಕೊಳ್ಳಬೇಕೆಂದು ಸಂಸ್ಥೆಯ ಕಾರ್ಯಕರ್ತರಿಗೆ ಹಾಲಕೆರೆಯ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಸಭಾ ಮಂಟಪದಲ್ಲಿ ಸೋಮವಾರ ಜರುಗಿದ ದಾನಿ ಶ್ರೀಮತಿ ಪಾರ್ವತಮ್ಮ ಮೆಣಸಿಗಿಯವರ 11ನೇ ಪುಣ್ಯ ಸ್ಮರಣೋತ್ಸವದ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ತಾಯಿಗೆ ತಕ್ಕ ಮಗ ಎಂದರೆ ಮಲ್ಲಿಕಾರ್ಜುನಪ್ಪನವರು. ಅವರು ಎಲ್ಲಿಯೇ ದಾನ ನೀಡಿದರೂ ಪಾರ್ವತಮ್ಮನವರು ಎಂದಿಗೂ ಅವರನ್ನು ಆಕ್ಷೇಪಿಸಲಿಲ್ಲ. ಸೇವಾ ನಿವೃತ್ತಿಯ ನಂತರ ತಮಗೆ ಬಂದ ಎಲ್ಲ ಹಣವನ್ನೂ ಕಿಂಚಿತ್ತೂ ಯೋಚನೆ ಮಾಡದೆ ಶ್ರೀಮಠಕ್ಕೆ ಅರ್ಪಣೆ ಮಾಡಿದವರು ಅವರು. ತಮ್ಮದೆಂಬುವುದನ್ನು ಏನನ್ನೂ ಉಳಿಸಿಕೊಳ್ಳದೆ ಎಲ್ಲವನ್ನೂ ಶ್ರೀಮಠಕ್ಕೆ ಧಾರೆ ಎರೆದಿರುವ ಮಲ್ಲಿಕಾರ್ಜುನಪ್ಪನವರು ದಾನಿಗಳಿಗೊಂದು ಮಾದರಿಯಾಗಿದ್ದಾರೆ ಎಂದು ಶ್ರೀಗಳು ಕೊಂಡಾಡಿದರು.



ತಮ್ಮ ತಾಯಿಯ ಸ್ಮರಣಾರ್ಥವಾಗಿ ಮಲ್ಲಿಕಾರ್ಜುನಪ್ಪ ಮೆಣಸಗಿಯವರು ಶ್ರೀ ಅನ್ನದಾನೇಶ್ವರ ಶಿಕ್ಷಣ ಸಂಸ್ಥೆಯ ಎಲ್ಲ ಅಂಗ ಸಂಸ್ಥೆಗಳ ವಿದ್ಯಾರ್ಥಿಗಳಿಗೆ ಧನ ರೂಪದ ಪ್ರತಿಭಾ ಪುರಸ್ಕಾರ ನೀಡಿದರು. ಹಾಗೆಯೇ ಎಲ್ಲ ಅಂಗ ಸಂಸ್ಥೆಗಳಲ್ಲಿ ಬಿಸಿಯೂಟ ಮಾಡುವ ಎಲ್ಲ ಸಿಬ್ಬಂದಿಯವರಿಗೆ ಬಟ್ಟೆಗಳನ್ನು ವಿತರಿಸಿದರು. ಸಮಾರಂಭದಲ್ಲಿ ಅನೇಕ ಗಣ್ಯರನ್ನು, ಶಿಕ್ಷಕರನ್ನು, ಪತ್ರಕರ್ತರನ್ನು, ತಮ್ಮ ನೌಕರಿಗಾಗಿ ಆಗ ನೂರು ರೂಪಾಯಿ ಕೊಟ್ಟು ಹರಸಿದ ಶಾರಾಬಿ ಬಾಬಣ್ಣವರ ಅವರ ಮಗಳು ರಾಜಮ್ಮ ಬಾಬಣ್ಣವರ ಮತ್ತು ಅನ್ನಪೂರ್ಣಮ್ಮ ಶಿರ್ಸಿ ಅವರನ್ನು ಸನ್ಮಾನಿಸುವ ಮೂಲಕ ಮಲ್ಲಿಕಾರ್ಜುನಪ್ಪ ಮೆಣಸಗಿಯವರು ಇತರರಿಗೆ ಮೇಲ್ಪಂಕ್ತಿ ಹಾಕಿಕೊಟ್ಟರು ಎಂದರು.

ಎಂ.ಕೆ. ಗುರುಸಿದ್ಧೇಶ್ವರ ಶಾಸ್ತ್ರಿಗಳು ಪ್ರಾಸ್ತಾವಿಕವಾಗಿ ಮಾತನಾಡಿ, ಮಲ್ಲಿಕಾರ್ಜುನಪ್ಪ ಮೆಣಸಿಗಿಯವರ ಮತ್ತು ಅವರ ತಾಯಿ ಪಾರ್ವತಮ್ಮನವರ ವ್ಯಕ್ತಿತ್ವದ ಪರಿಚಯ ಮಾಡಿಕೊಟ್ಟರು. ಕೊಟ್ಟೂರಿನ ದರೂರು ಶ್ರೀಗಳವರು ಸಮಾರಂಭದ ಸಮ್ಮುಖವನ್ನು ವಹಿಸಿದ್ದರು. ವೇದಿಕೆಯ ಮೇಲೆ ನಿವೃತ್ತ ಪ್ರಾಚಾರ್ಯ ಸಿ.ಐ. ಮರಡಿಮಠ, ಆಡಳಿತಾಧಿಕಾರಿ ಎನ್.ಆರ್. ಗೌಡರ, ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಕಾಲೇಜು ಆಡಳಿತ ಮಂಡಳಿ ಅಧ್ಯಕ್ಷ ಬಸವರಾಜ ವೀರಾಪೂರ, ಅಬ್ಬಿಗೇರಿಯ ಡಾ. ಆರ್.ಬಿ. ಬಸವರಡ್ಡೇರ, ನಿವೃತ್ತ ಶಿಕ್ಷಕ ಕಮತರ, ಆಡಳಿತ ಮಂಡಳಿ ಸದಸ್ಯ ತಳಬಾಳ, ದಾನಿ ಮಲ್ಲಿಕಾರ್ಜುನಪ್ಪ ಮೆಣಸಿಗಿ ಇನ್ನೂ ಮುಂತಾದವರಿದ್ದರು.

ಸಮಾರಂಭದಲ್ಲಿ ಮೆಣಸಿಗಿ ಕುಟುಂಬದ ಬಂಧು ಬಾಂಧವರು ಪಾಲ್ಗೊಂಡಿದ್ದರು. ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ಸ್ವಾಗತಿಸಿದರು.ಶಿಕ್ಷಕ ಐ.ಬಿ. ಹೊಟ್ಟಿನ ನಿರೂಪಿಸಿದರು.

ಕಣ್ಣಿಗೆ ಕಾಣದ ದೇವರನ್ನು ಹುಡುಕುತ್ತ ಹೋಗಿ ಸಹಸ್ರಾರು ರೂಪಾಯಿಗಳನ್ನು ಕಳೆದುಕೊಳ್ಳುತ್ತಿರುವ ಇಂದಿನ ಜನರು ಮನೆಯಲ್ಲಿಯೇ ಇರುವ ಭಗವಂತ ಸ್ವ–ರೂಪಿ ತಂದೆ–ತಾಯಿಗಳನ್ನು ಪೂಜಿಸಿದರೆ ಸಾಕು ಅವರಿಗೆ ಭಗವಂತನ ದರ್ಶನದ ಪುಣ್ಯಭಾಗ್ಯ ಲಭಿಸುತ್ತದೆ. ಮಲ್ಲಿಕಾರ್ಜುನಪ್ಪನವರ ಸಮಾಜಮುಖಿ ಸೇವೆಯನ್ನು ಎಲ್ಲರೂ ಗಮನಿಸಿ, ಅವರನ್ನು ಅನುಕರಿಸಬೇಕು. ಮುಂದಿನ ದಿನಗಳಲ್ಲಿ ನಮ್ಮ ಸಂಸ್ಥೆಯ ಬಾಲಿಕೆಯರ ಪ್ರೌಢಶಾಲೆಯ ಕಟ್ಟಡವನ್ನು ನಿರ್ಮಿಸಲು ಉದ್ದೇಶಿಸಿದ್ದು, ಅದಕ್ಕೆ ದಾನಿ ಪಾರ್ವತಮ್ಮ ಮೆಣಸಗಿಯವರ ಹೆಸರನ್ನೇ ಇರಿಸಲಾಗುವದೆಂದು ಶ್ರೀಗಳು ಘೋಷಿಸಿದರು.

# ಪ್ರಜಾಪ್ರಭುತ್ವದ ಸದೃಢತೆಗೆ ಮತ ಚಲಾಯಿಸಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶೇ 100ರಷ್ಟು ಮತದಾನ ವಾಗುವುದರಿಂದ ಸದೃಢ ಪ್ರಜಾಪ್ರಭುತ್ವ ಕಟ್ಟಲು ಸಾಧ್ಯ. ಆ ದಿಸೆಯಲ್ಲಿ ಸಂವಿಧಾನಾತ್ಮಕ ಹಕ್ಕಾದ ಮತದಾನ ಕಾರ್ಯದಲ್ಲಿ ತಪ್ಪದೇ ಪಾಲ್ಗೊಳ್ಳಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಅವರು ಹೇಳಿದರು.

ನಗರದ ಪಂಪ್ ಸರ್ಕಲ್‌ನಲ್ಲಿ ಲಕ್ಷ್ಮೇಶ್ವರ ತಾಲೂಕು ಸ್ವೀಪ್ ಸಮಿತಿ, ತಾಲೂಕು ಪಂಚಾಯಿತಿ, ತಾಲೂಕಾಡಳಿತ, ಪುರಸಭೆ ಲಕ್ಷ್ಮೇಶ್ವರ, ತಾಲೂಕು ಶಿಕ್ಷಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಮತದಾನ ಜಾಗೃತಿ, ಮಾನವ ಸರಪಳಿ ಮತ್ತು ಶಾಲಾ ಮಕ್ಕಳಿಂದ ಪಿರಾಮಿಡ್ ಪ್ರದರ್ಶನದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮೇ 7ರಂದು ಲೋಕಸಭೆ ಚುನಾವಣೆಗೆ ಮತದಾನ ನಡೆಯಲಿದ್ದು, ಎಲ್ಲ ಅರ್ಹ ಮತದಾರರು ಒತ್ತಡಗಳನ್ನು ಬದಿಗೊತ್ತಿ ಮತದಾನದಲ್ಲಿ ಪಾಲ್ಗೊಳ್ಳಬೇಕು. ಯಾವುದೇ ಆಮಿಷಗಳಿಗೆ ಮರುಳಾಗದೆ ತಮ್ಮ ಹಕ್ಕನ್ನು ಚಲಾಯಿಸುವಂತೆ ಮನವಿ ಮಾಡಿದರು.

ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿ, ಸಂವಿಧಾನವು ಎಲ್ಲರಿಗೂ ಮತದಾನದ ಹಕ್ಕನ್ನು ನೀಡಿದೆ. 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ಮತದಾರರು ನಿರ್ಭೀತಿಯಿಂದ ಮತ ಚಲಾಯಿಸಬೇಕು. ಸದೃಢ ಪ್ರಜಾಪ್ರಭುತ್ವಕ್ಕೆ ಯುವ ಜನರು ಮತದಾನದಲ್ಲಿ ಭಾಗಿಯಾಗುವುದು ಅತ್ಯವಶ್ಯ ಎಂದರು.

ಶಿಕ್ಷಣ ಇಲಾಖೆಯ ಈಶ್ವರ ಮೆಡ್ಲೇರಿ, ಪಿಡಿಒ ಬಸವರಾಜ ಬಳೂಟಗಿ, ವಿವಿಧ ಶಾಲೆಗಳ ಶಿಕ್ಷಕ್ಕರು, ಪುರಸಭೆ ಅಧಿಕಾರಿಗಳು ಮತ್ತು ಸಿಬ್ಬಂದಿ, ತಾ.ಪಂ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

### ಈಶ್ವರ–ಬಸವಣ್ಣ ದೇವರ 14ನೇ ವರ್ಷದ ಜಾತ್ರಾ ಮಹೋತ್ಸವ ಇಂದು

# ಕಳಸಾಪೂರದಲ್ಲಿ ಸಾಮೂಹಿಕ ವಿವಾಹ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕಳಸಾಪುರ ಸುಕ್ಷೇತ್ರದ ಶ್ರೀ ಈಶ್ವರ ಬಸವಣ್ಣ ದೇವರ ಜಾತ್ರಾ ಮಹೋತ್ಸವದ ರೂವಾರಿ ಲಿಂ. ಶ್ರೀಪಾದಯ್ಯ ಇಟಗಿಮಠ ಅವರ ಸ್ಮರಣೆಯಲ್ಲಿ ಏ.9ರಂದು ಸುಕ್ಷೇತ್ರದ ಶ್ರೀ ಈಶ್ವರ, ಬಸವಣ್ಣ ದೇವರ 14ನೇ ವರ್ಷದ ಜಾತ್ರಾ ಮಹೋತ್ಸವ, ಸರ್ವಧರ್ಮ ಸಾಮೂಹಿಕ ವಿವಾಹ ಮಹೋತ್ಸವ ಹಾಗೂ ಸಂಜೆ 5.30ಕ್ಕೆ ಮಹಾರಥೋತ್ಸವ ಜರುಗಲಿದೆ.

ಏ.9ರಂದು ಬೆಳಿಗ್ಗೆ 11.30ಕ್ಕೆ ಸಾಮೂಹಿಕ ವಿವಾಹ ಮಹೋತ್ಸವದಲ್ಲಿ ಬೆಂಗಳೂರಿನ ಸುಕ್ಷೇತ್ರ ಶಿವಗಂಗಾದ ಶ್ರೀ ಮಲಯ ಶಾಂತಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಮಣಕವಾಡದ ಶ್ರೀ ಗುರು ಅನ್ನದಾನೇಶ್ವರ ದೇವಮಂದಿರ ಮಹಾಮಠದ ಶ್ರೀ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು, ಬಳಗಾನೂರು ಚನ್ನವೀರ ಶರಣರ ಮಠದ ಶ್ರೀ ಶಿವಶಾಂತವೀರ ಶರಣರು, ಅಡ್ನೂರ–ರಾಜೂರ–ಗದಗ ಬ್ರಹನ್ಮಠದ ಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮಿಗಳು, ಓಂಕಾರಗಿರಿ ಓಂಕಾರೇಶ್ವರ ಹಿರೇಮಠದ ಶ್ರೀ ಫಕೀರೇಶ್ವರ ಶಿವಾಚಾರ್ಯ ಸ್ವಾಮಿಗಳು, ನಾಗರಹಾಳ ಬಸವಧರ್ಮ ಮಠದ ಶ್ರೀ ಶಾಂತವೀರ ಮಹಾಸ್ವಾಮಿಗಳು, ಸಿದ್ದನಕೊಳ್ಳದ ಶ್ರೀ ಡಾ. ಶಿವಕುಮಾರ ಸ್ವಾಮಿಗಳು, ಸಿಂಧೂರಿನ ಸಿದ್ದಾಶ್ರಮ ವೆಂಕಟಗಿರಿಯ ಡಾ. ಸಿದ್ದರಾಮೇಶ್ವರ ಶರಣರು, ಕೋಟ್ನಿಕಲ್ ಸಂಗಮೇಶ್ವರ ಮಠದ ವೇ.ಮೂ.ಸಂಗಯ್ಯ ತಾತನವರು, ಗಜೇಂದ್ರಗಡ ರೇಣುಕಾಚಾರ್ಯ ಮಠದ ವೇ.ಮೂ.ಚಂದ್ರಶೇಖರ ಶರಣರು,ಅಡ್ನೂರ–ನರೇಗಲ್ ದರ್ಗಾದ ರೆಹಮಾನ್ ಮಂಜೂರ ಹುಸೇನ್ ಶಾವಲೀ ಶರಣರು ಉಪಸ್ಥಿತರಿರುವರು.



ಏ.9ರ ಸಂಜೆ 7 ಗಂಟೆಗೆ ಲಿಂ. ಶ್ರೀಪಾದಯ್ಯ ಇಟಗಿಮಠ, ಲಿಂ. ರಮೇಶ ಘೋಡಕೆ, ಲಿಂ. ಈರಯ್ಯ ಇಟಗಿಮಠ, ದಿ. ಮಕ್ಬುಲ್‌ಸಾಬ್ ದೊಡ್ಡಮನಿ ಇವರ ಸ್ಮರಣಾರ್ಥ ಕಲಾವಿದ ವೀರಯ್ಯ ಇವರ ನೇತೃತ್ವದಲ್ಲಿ ಗುರೂಜಿ ಮೆಲೋಡಿಸ್ ಕಲಾತಂಡ ಇವರಿಂದ ರಸಮಂಜರಿ ಕಾರ್ಯಕ್ರಮ ಜರುಗುವುದು. ಕಾರ್ಯಕ್ರಮವನ್ನು ಗ್ರಾ.ಪಂ. ಸದಸ್ಯ ನಿಂಗಯ್ಯ ಇಟಗಿಮಠ ಉದ್ಘಾಟಿಸುವರು. ಗ್ರಾ.ಪಂ ಮಾಜಿ ಅಧ್ಯಕ್ಷ ಮಂಜುನಾಥ ಘೋಡಕೆ ಅಧ್ಯಕ್ಷತೆ ವಹಿಸುವರು.

ಬೆಳಗಾವಿಯ ನಿವೃತ್ತ ಪ್ರಾದೇಶಿಕ ಆಯುಕ್ತ ಎಂ.ಜಿ. ಹಿರೇಮಠ ಅಧ್ಯಕ್ಷತೆ ವಹಿಸುವರು. ವಿಜಯಪುರದ ನಿವೃತ್ತ ಡಿವೈಎಸ್‌ಪಿ ಬಿ.ಆರ್. ಚೌಕಿಮಠ ವಿವಾಹ ಮಹೋತ್ಸವಕ್ಕೆ ಚಾಲನೆ ನೀಡುವರು. ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು. ವಿಶೇಷ ಅಹ್ವಾನಿತರಾಗಿ ವಿ.ಪ ಸದಸ್ಯರಾದ ಎಸ್.ವಿ. ಸಂಕನೂರ, ಸಲೀಂ ಅಹಮದ್, ಮಾಜಿ ಶಾಸಕ ಡಿ.ಆರ್. ಪಾಟೀಲ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಆಗಮಿಸುವರು. ಮುಖ್ಯ ಅತಿಥಿಗಳಾಗಿ ಅನಿಲ್ ಮೆಣಸಿಕಾಯಿ, ಎಚ್.ಜಿ. ಹಿರೇಗೌಡ್ರ, ಶಿವಕುಮಾರಗೌಡ ಪಾಟೀಲ, ಯೋಗೇಶ ಎ., ಬಸವರಾಜ ಬೆಳದಡಿ, ಮಲ್ಲಪ್ಪ ಕಲ್ಗುಡಿ, ಬಸವಣ್ಣಪ್ಪ ಚಿಂಚಲಿ, ಸಿ.ಬಿ. ದೊಡ್ಡಗೌಡ್ರ, ಶಂಭುಲಿಂಗಯ್ಯ ಕಲ್ಮಠ, ಪಿ.ಸಿ. ಹಿರೇಮಠ, ಗ್ರಾ.ಪಂ ಅಧ್ಯಕ್ಷೆ ಅನುಸೂಯ ಬೆಟಗೇರಿ, ಉಪಾಧ್ಯಕ್ಷೆ ರಾಜೇಶ್ವರಿ ಘೋಡಕೆ, ಮಂಜುನಾಥಸ್ವಾಮಿ ಹಿರೇಮಠ, ರಾಜು ಖಾನಾಪುರ, ಅಶೋಕ ಹೊಸಅಂಗಡಿ, ಗುರು ಹಡಗಲಿಮಠ ಭಾಗವಹಿಸುವರು. ಶಿವಲಿಂಗಯ್ಯ ಸ್ವಾಮಿಗಳು ಹಿರೇಮಠ ಸಿದ್ದಾಪುರ ಅವರು ಕಾರ್ಯಕ್ರಮ ನಿರುಪಿಸುವರು. ಸಂಜೆ 5.30 ಗಂಟೆಗೆ ಮಹಾರಥೋತ್ಸವ ಜರುಗುವುದು.

ಏ.10ರ ಸಂಜೆ 5.30 ಗಂಟೆಗೆ ಲಘು ರಥೋತ್ಸವ ಜರುಗಲಿದೆ ಎಂದು ಪ್ರಕಟಣೆ ತಿಳಿಸಿದೆ.

## ಸಂಪಾದಕೀಯ

# ಒಕ್ಕೂಟ ವ್ಯವಸ್ಥೆಗೆ ಮಾರಕ

ಬರ ಪರಿಹಾರ ಕೊಡುವಲ್ಲಿ ಕೇಂದ್ರ ಸರಕಾರದ ವಿಳಂಬ ನೀತಿಯನ್ನು ಪ್ರಶ್ನಿಸಿ ಕರ್ನಾಟಕ ಸುಪ್ರೀಂಕೋರ್ಟ್ ಮೆಟ್ಟಿಲೇರಬೇಕಾಯಿತು. ಒಕ್ಕೂಟ ವ್ಯವಸ್ಥೆಯಲ್ಲಿ ರಾಜ್ಯದ ಪಾಲಿನ ಅನುದಾನ ಬಿಡುಗಡೆ ಕೋರಿ ಸುಪ್ರೀಂಕೋರ್ಟ್ ಮೊರೆ ಹೋದ ದೇಶದ ಮೊಟ್ಟ ಮೊದಲ ಪ್ರಕರಣ ಇದಾಗಿದ್ದು, ಒಟ್ಟಾರೆ ವಿದ್ಯಮಾನ ಒಕ್ಕೂಟ ವ್ಯವಸ್ಥೆಯನ್ನು ಅಣಕಿಸುವಂತಾಗಿದೆ.

ರಾಜ್ಯದಲ್ಲಿ ತೀವ್ರ ಬರ ಆವರಿಸಿದ್ದು ಪರಿಹಾರ ಬಿಡುಗಡೆ ಕೋರಿ ಕರ್ನಾಟಕ ಸರಕಾರ ಕೇಂದ್ರಕ್ಕೆ ಮನವಿ ಮಾಡಿಕೊಂಡಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಧಾನಿ ನರೇಂದ್ರ ಮೋದಿ ಅವರನ್ನು ಖುದ್ದಾಗಿ ಭೇಟಿ ಮಾಡಿ ಮನವಿ ಮಾಡಿಕೊಂಡರು. ಸಚಿವ ಕೃಷ್ಣ ಭೈರೇಗೌಡ ಸಹ ಕೇಂದ್ರದ ಮಂತ್ರಿಗಳನ್ನು ಭೇಟಿ ಮಾಡಿ ಬರ ಪರಿಹಾರಕ್ಕೆ ಒತ್ತಾಯಿಸಿದರು.

ರಾಜ್ಯ ಸರಕಾರ ಹೀಗೆ ಅನುದಾನ ಕೋರಿ ಕೇಂದ್ರದ ಮೊರೆ ಹೋದರೂ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಾತ್ರ ಸೊಪ್ಪು ಹಾಕಲಿಲ್ಲ. ರಾಜ್ಯಕ್ಕೆ ಕೊಡಬೇಕಾದ ಎಲ್ಲ ಅನುದಾನ ಬಿಡುಗಡೆ ಮಾಡಲಾಗಿದೆ. ಈ ಸಂಬಂಧ ಕೇಂದ್ರ ಸರಕಾರ ಶೀಘ್ರವೇ ಶ್ವೇತಪತ್ರ ಹೊರಡಿಸಲಿದೆ ಎನ್ನುವ ಉದ್ಧಟತನದ ಮಾತನಾಡಿದರು.

ಇತ್ತ ರಾಜ್ಯ ಬಿಜೆಪಿ ನಾಯಕರೂ ಸಹ ರಾಜ್ಯ ಸರಕಾರದ ವಿರುದ್ಧ ಮುಗಿಬಿದ್ದರು. ಕೇಂದ್ರ ಕೊಟ್ಟ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಿಕೊಂಡಿದೆ ಎನ್ನುವ ತಲೆಬುಡವಿಲ್ಲದ ಆರೋಪ ಮಾಡಿದರು. ಅದರಲ್ಲೂ ಪ್ರಹ್ಲಾದ ಜೋಶಿ ಅವರಂಥ ನಾಯಕರು, ಕೇಂದ್ರದಿಂದ ರಾಜ್ಯಕ್ಕೆ ಯಾವುದೇ ಬಾಕಿ ಬರಬೇಕಾಗಿಲ್ಲ ಎಂದು ಷರಾ ಹಾಕಿದರು.

ಬರ ಪರಿಹಾರ ಹೆಸರಿನ ರಾಜಕೀಯ ಕೆಸರೆರಚಾಟ ಏಳು ತಿಂಗಳು ನಡೆಯಿತು. ಯಾವಾಗ ರಾಜ್ಯ ಸರಕಾರ ಸುಪ್ರೀಂಕೋರ್ಟ್ ಮೊರೆ ಹೋಗುವ ಚಿಂತನೆ ನಡೆಸುತ್ತಿದ್ದಂತೆ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಎಚ್ಚೆತ್ತುಕೊಂಡರು. ಕರ್ನಾಟಕ ಬರ ಪರಿಹಾರ ಕೋರುವಲ್ಲಿ ವಿಳಂಬ ಮಾಡಿತು. ಹೀಗಾಗಿ ಪರಿಹಾರ ನೀಡಲು ವಿಳಂಬವಾಗಿದೆ ಎನ್ನುವ ಮೂಲಕ ತಮ್ಮ ತಪ್ಪನ್ನು ಒಪ್ಪಿಕೊಂಡರು. ಶ್ವೇತಪತ್ರವನ್ನು ಮರೆತುಬಿಟ್ಟರು.

ಅಂತಿಮವಾಗಿ ಇವತ್ತು ಸುಪ್ರೀಂಕೋರ್ಟ್ ಕೇಂದ್ರ ಸರಕಾರಕ್ಕೆ ಗಡುವು ನೀಡಿದೆ. ಎರಡು ವಾರದಲ್ಲಿ ಕರ್ನಾಟಕದ ವಾದವನ್ನು ಪುರಸ್ಕರಿಸಬೇಕು ಎನ್ನುವ ಆದೇಶ ನೀಡಿದೆ. ಒಂದು ವೇಳೆ ಕೇಂದ್ರ ಸರಕಾರ ತಪ್ಪೇ ಮಾಡಿಲ್ಲ ಎನ್ನುವುದಾಗಿದ್ದರೆ, ಆ ಬಗ್ಗೆ ಸುಪ್ರೀಂಕೋರ್ಟಿಗೆ ಅಫಡವಿಟ್ ಸಲ್ಲಿಸಬಹುದಿತ್ತು. ಅಥವಾ ಪರಿಹಾರ ಕೊಟ್ಟಿರುವ ಬಗ್ಗೆ ದಾಖಲೆ ಒದಗಿಸಲು ಕಾಲಾವಕಾಶ ಕೇಳಬಹುದಿತ್ತು.

ಇದ್ಯಾವುದನ್ನೂ ಮಾಡದ ಕೇಂದ್ರ ಸರಕಾರ ಸುಪ್ರೀಂಕೋರ್ಟ್ ಅಂಗಳದಲ್ಲಿ ಮೌನವಾಗಿದ್ದು, ತನ್ನ ತಪ್ಪನ್ನು ಒಪ್ಪಿಕೊಂಡಿದೆ. ಇಂಥ ತಪ್ಪುಗಳು ಒಕ್ಕೂಟ ವ್ಯವಸ್ಥೆ ಮಾರಕ ಎನ್ನುವ ಸಂವಿಧಾನಿಕ ಪ್ರಜ್ಞೆ ಇಲ್ಲದೆ ನಡೆದಿಕೊಂಡಿದ್ದು ಕೇಂದ್ರ ಸರಕಾರದ ಬಹುದೊಡ್ಡ ತಪ್ಪು.

## ಯುಗಾದಿ ಹಬ್ಬದ ನಿಮಿತ್ತ ಲೇಖನ

# ಪ್ರಕೃತಿಯನ್ನು ಅರಳಿಸುವ ಹಬ್ಬ ಯುಗಾದಿ





ಭಾರತದ ಜೀವಾಳವೇ ಹಬ್ಬಗಳು. ರಸ ಋಷಿಗಳು ಬಾಳಿ ಬದುಕಿದ ಬೀಡು. ಹಲವು ಸಂಪ್ರದಾಗಳ ತವರೂರು, ವಿವಿಧತೆಯಲ್ಲಿ ಏಕತೆಯನ್ನು ಕಾಣುವ ಭವ್ಯ ಭಾರತ ನಮ್ಮ ದೇಶ. ಪ್ರಕೃತಿಯಲ್ಲಿ ವರ್ಷದಲ್ಲಿ ಒಂದು ಸಾರಿ ಬದಲಾವಣೆ ಕಾಣುತ್ತೇವೆ. ಮರಗಿಡಗಳಲ್ಲಿ ಹೊಸ ಚಿಗುರೊಡೆದು ಮದುವಣಗಿತ್ತಿಯಂತೆ ಕಂಗೊಳಿಸಿ, ಕೋಗಿಲೆಗಳನ್ನು ಬರಮಾಡಿಕೊಳ್ಳುವ ಹಬ್ಬ ಯುಗಾದಿ. ಯುಗ ಯುಗಾದಿ ಕಳೆದರೂ ಯುಗಾದಿ ಮರಳಿ ಬರುತಿದೆ, ಹೊಸ ವರುಷಕೆ ಹೊಸ ಹರುಷವ ಹೊಸತು ಹೊಸತು ತರುತಿದೆ– ಕವಿ ದ.ರಾ. ಬೇಂದ್ರೆಯವರ ಯುಗಾದಿ ಬಗೆಗಿನ ಈ ಕವಿತೆಯಂತೆ ಹೊಸ ಹೆಜ್ಜೆ ಇಡುವ ಈ ದಿನವೇ ಯುಗಾದಿ. ಹಣ್ಣೆಲೆಗಳೆಲ್ಲ ಉದುರಿ, ಮರಗಿಡಗಳೆಲ್ಲ ಹೊಸ ಚಿಗುರಿನೊಂದಿಗೆ ಕಂಗೊಳಿಸುವ ಕಾಲ. ಪ್ರಕೃತಿಯು ತನ್ನ ಮೈಕೊಡವಿ ಹಸಿರನ್ನುಟ್ಟು ಅಪ್ಸರೆಯಂತೆ ಮೆರೆಯುವ ಸವಿಗಾಲವೇ ಯುಗಾದಿ ಕಾಲ ಎಂಬ ಕವಿವಾಣಿಯಂತೆ, ಯುಗಾದಿ ನಮ್ಮ ಜೀವನದಲ್ಲಿ ಶುಭ ದಿನವಾಗಿದೆ. ಯುಗಾದಿ, ಅಕ್ಷಯ ತೃತೀಯ, ವಿಜಯದಶಮಿ ಮತ್ತು ಬಲಿ ಪಾಡ್ಯ ಅರ್ಧದಿವಸ ಈ ಮೂರುವರೆ ಶುಭ ಮೂರ್ತದಲ್ಲಿ ಯುಗಾದಿಯೇ ವರ್ಷದ ಪ್ರಾರಂಭದ ಅತ್ಯಂತ ಶುಭ ದಿನವಾಗಿದೆ. ಯುಗಾದಿ ಪದದ ಉತ್ಪತ್ತಿ ಯುಗ+ಆದಿ. ಅಂದರೆ ಹೊಸ ಯುಗದ ಪ್ರಾರಂಭ ಎಂದು ಕರೆಯಲಾಗುತ್ತದೆ. ಈ ವರ್ಷ ಕ್ರೋಧಿನಾಮ ಸಂವತ್ಸರದಲ್ಲಿ ಚೈತ್ರ ಮಾಸದ ಶುಕ್ಲ ಪಾಡ್ಯದಂದು ಅಂದರೆ ಏಪ್ರಿಲ್ 9ರಂದು ಯುಗಾದಿ ಹಬ್ಬವನ್ನು ಆಚರಿಸಲಾಗುತ್ತದೆ. ಹಿಂದೂ ಪುರಾಣಗಳ ಪ್ರಕಾರ ಸೃಷ್ಟಿಕರ್ತ ಭಗವಾನ್ ಬ್ರಹ್ಮ ಈ ದಿನ ತನ್ನ ಸೃಷ್ಟಿಯನ್ನು ಪ್ರಾರಂಭಿಸಿದ ಎಂಬ ನಂಬಿಕೆ ಇದೆ.

ಜನೇವರಿ 1 ಆಂಗ್ಲರ ಹೊಸ ವರ್ಷವಾದರೆ, ನಮ್ಮ ಸನಾತನ ಧರ್ಮದ ಪ್ರಕಾರ ಹೊಸ ವರ್ಷವೆಂದರೆ ಯುಗಾದಿ ಹಬ್ಬವಾಗಿದೆ. ಸುಗ್ಗಿಯ ಕಾಲ ಹಿಗ್ಗನು ತರುವ ಕಾಲ. ನಾಡಿನ ಜನರಲ್ಲಿ ಹರುಷ ತುಂಬುವ ಕಾಲ. ಕೆಟ್ಟದ್ದು ನಿವೃತ್ತಿಯಾಗಿ ಒಳ್ಳೆಯದು ಪ್ರಾರಂಭವಾಗುವ ಕಾಲ ಯುಗಾದಿ ಕಾಲವಾಗಿದೆ. ಯುಗಾದಿಯಲ್ಲಿ ಚಾಂದ್ರಮಾನ ಯುಗಾದಿ, ಸೌರಮಾನ ಯುಗಾದಿ ಆಚರಣೆಯಲ್ಲಿವೆ. ಚಂದ್ರನ ಚಲನೆಯನ್ನು ಆಧರಿಸಿ ಚಾಂದ್ರಮಾನ ಯುಗಾದಿ ಹಾಗೂ ಸೂರ್ಯನ ಚಲನೆಯನ್ನು ಆಧರಿಸಿ ಸೌರಮಾನ ಯುಗಾದಿ ಎಂದು ಆಚರಿಸುತ್ತಾರೆ. ನಮ್ಮ ಕರ್ನಾಟಕದಲ್ಲಿ ಚಾಂದ್ರಮಾನ ಯುಗಾದಿ ಆಚರಿಸಿದರೆ, ತಮಿಳುನಾಡು, ಕೇರಳ ಹಾಗೂ ಉತ್ತರ ಭಾರತದಲ್ಲಿ ಸೌರಮಾನ ಯುಗಾದಿಯನ್ನು ಆಚರಿಸಲಾಗುತ್ತದೆ. ಕರ್ನಾಟಕದಲ್ಲಿ ಯುಗಾದಿ ಹಬ್ಬದ ದಿನದಂದು ಮನೆಯನ್ನು ಶುಚಿಗೊಳಿಸಿ, ಸುಣ್ಣ-ಬಣ್ಣ ಬಳಿದು ಅಲಂಕರಿಸುತ್ತಾರೆ. ಮನೆಯ ಮುಂದೆ ರಂಗವಲ್ಲಿ ಹಾಕುತ್ತಾರೆ. ಮನೆಯ ಬಾಗಿಲುಗಳಿಗೆ ಮಾವಿನ ಎಲೆಯ ಹಾಗೂ ಬೇವಿನ ಸೊಪ್ಪಿನಿಂದ ತೋರಣ ಕಟ್ಟಿ ಮನೆಯನ್ನು ಅಲಂಕರಿಸುತ್ತಾರೆ. ಹಾಗೆ ಮನೆ ಮಂದಿ ಈ ದಿನ ಬ್ರಾಹ್ಮೀ ಮೂಹೂರ್ತದಲ್ಲಿ ಎದ್ದು ಅಭ್ಯಂಜನ ಸ್ನಾನ (ಎಣ್ಣೆ ಹಚ್ಚಿಕೊಂಡು ಸ್ನಾನ ಮಾಡುವುದು) ಮಾಡಿ ಮಾವಿನ ಎಲೆಗಳಿಂದ ಮನೆಯ ಎಲ್ಲ ಕಡೆಗೆ ಕಳಶದ ನೀರನ್ನು ಸಿಂಪಡಿಸುತ್ತಾರೆ. ನಂತರ ವಿಶೇಷವಾಗಿ ಈ ದಿನ ಸೂರ್ಯ ನಮಸ್ಕಾರ ಮಾಡಿ ಕುಲದೇವತೆಗೆ ಪೂಜೆ ಸಲ್ಲಿಸುವುದು ನಂತರ ಮನೆಮಂದಿಗೆ, ಪರಿಚಯಸ್ಥರಿಗೆ ಈ ದಿನ ಬೇವು-ಬೆಲ್ಲ ನೀಡಿ ಖುಷಿ ಪಡುತ್ತಾರೆ.

ಬೇವು-ಬೆಲ್ಲ ಸುಖ-ದುಃಖದ ಸಂಕೇತವಾಗಿದೆ. ನಮ್ಮ ಜೀವನದಲ್ಲಿ ಈ ಎರಡನ್ನೂ ಸರಿದೂಗಿಸಿಕೊಂಡು ಬದುಕಬೇಕೆಂಬ ನಿತ್ಯ ಸತ್ಯನ್ನು ನಮಗೆ ತಿಳಿಸುತ್ತದೆ. ನೋವುಗಳು ಬೇವಿನಂತೆ ಕಹಿಯಾಗಿ, ಬೆಲ್ಲವು ಸಂತೋಷದ ಅನುಭೂತಿಗಳು ಜೀವನದಲ್ಲಿ ಸುಖ-ದುಃಖಗಳನ್ನು ಸಮಾನವಾಗಿ ಸ್ವೀರಿಸುವುದು ಎಂದರ್ಥ. ನಂತರ ಈ ಹಬ್ಬದಲ್ಲಿ ಮನೆಯ ಹಿರಿಯ-ರಿಂದ ಪಂಚಾಂಗ ಪಠಣ ಮಾಡಿಸುವುದು ರೂಢಿಯಲ್ಲಿದೆ. ಸಾವಿರಾರು ವರ್ಷಗಳಿಂದ ಋಷಿಮುನಿಗಳಿಂದ ಬಂದ ಪದ್ಧತಿ ಇದಾಗಿದೆ.

ಪಂಚಾಂಗವೆಂದರೆ ಹಿಂದೂ ಕ್ಯಾಲೆಂಡರ್. ಇದರಿಂದ ನಮಗೆ ತಿಥಿ, ವಾರ ನಕ್ಷತ್ರ, ಯೋಗ, ಕರಣದ ಪರಿಕಲ್ಪನೆ ಸಿದ್ಧಿಯಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರ ಮನೆಯಲ್ಲಿಯೂ ಪಂಚಾಂಗ ಇರಬೇಕು ಎನ್ನುತ್ತಾರೆ ಹಿರಿಯರು. ಈ ದಿನ ಪ್ರತಿಯೊಬ್ಬರು ಹೊಸ ಬಟ್ಟೆತೊಡುವುದು, ಹಣೆಗೆ ತಿಲಕವಿಡುವುದು ಹಾಗೂ ನಿತ್ಯ ಪೂಜೆ ಮಾಡುವುದು ರೂಢಿಯಲ್ಲಿದೆ. ಈ ದಿನ ಹೊಸದಾಗಿ ತಂದ ಪಂಚಾಂಗಕ್ಕೆ ಶೃಂಗಾರ ಮಾಡಿ ಪೂಜೆ ಸಲ್ಲಿಸುತ್ತಾರೆ. ಹಾಗೆ ಸಂಜೆ ಗೋಧೂಳಿ ಸಮಯದಲ್ಲಿ ಮನೆಯವರೆಲ್ಲ ಸೇರಿ ಪಂಚಾಂಗ ಪಠಣ ಮಾಡುವುದು ರೂಢಿಯಲ್ಲಿದೆ. ಒಟ್ಟಾರೆಯಾಗಿ ಯುಗಾದಿಯು ಸಾಂಪ್ರದಾಯಿಕ ಆಚರಣೆಯೊಂದಿಗೆ ಪ್ರಕೃತಿಯೊಂದಿಗೆ ನಮ್ಮ ಅವಿನಾಭಾವ ಸಂಬಂಧದ ಪ್ರತೀಕವೆಂದರೆ ತಪ್ಪಾಗಲಾರದು. ಆದ್ದರಿಂದ, ಈ ಹೊಸತನದ ಹುರುಪನ್ನು ಯುಗಾದಿಯು ನಮ್ಮಲಿ ತರಲಿ ಎಂದು ಈ ಸಂಭ್ರಮದ ಯುಗಾದಿಯನ್ನು ಸಂತೋಷದಿಂದ ಆಚರಿಸೋಣ. ಎಲ್ಲರ ಬಾಳಲ್ಲಿ ಯುಗಾದಿ ಹೊಸದನ್ನು ತರಲಿ, ಸಂತೋಷವನ್ನು ತುಂಬಲಿ. ಮಳೆ ಬೆಳೆ ಚೆನ್ನಾಗಿ ಬರಲಿ ಎಂದು ಆಶಿಸೋಣ.

**– ಎಸ್.ಕೆ. ಆಡಿನ.**
**ಶಿಕ್ಷಕರು, ಹೊಳೆಆಲೂರ.**

## ಯುಗಾದಿ ನಿಮಿತ್ತ ಸನಾತನ ಸಂಸ್ಥೆಯ ವಿಶೇಷ ಲೇಖನ

# ಬ್ರಹ್ಮಧ್ವಜದ ಮಹತ್ವ



ಬ್ರಹ್ಮದೇವನು ಯುಗಾದಿ ಪಾಡ್ಯದಂದು ಸಕಲ ಸೃಷ್ಟಿಯನ್ನು ನಿರ್ಮಿಸಿದ್ದರಿಂದ ಧರ್ಮಶಾಸ್ತ್ರದಲ್ಲಿ ಧ್ವಜಕ್ಕೆ 'ಬ್ರಹ್ಮ ಧ್ವಜ' ಎನ್ನುತ್ತಾರೆ. ಇದಕ್ಕೆ ಕೆಲವು ಜನರು 'ಇಂದ್ರಧ್ವಜ' ಎಂದೂ ಹೇಳುತ್ತಾರೆ. ಧ್ವಜವು ವಿಜಯದ ಮತ್ತು ಆನಂದದ ಪ್ರತೀಕವಾಗಿದೆ. ಆದುದರಿಂದ ಮನೆಮನೆಗಳಲ್ಲಿ ಬ್ರಹ್ಮಧ್ವಜವನ್ನು ನಿಲ್ಲಿಸುತ್ತಾರೆ. ವಿಜಯದ ಪ್ರತೀಕವು ಎತ್ತರವಾಗಿರುತ್ತದೆಯಾದ್ದರಿಂದ ಬ್ರಹ್ಮಧ್ವಜವನ್ನು ಎತ್ತರವಾಗಿ ನಿಲ್ಲಿಸುತ್ತಾರೆ.

ಸೂರ್ಯೋದಯದ ನಂತರ ಬ್ರಹ್ಮಧ್ವಜವನ್ನು ಕೂಡಲೇ ನಿಲ್ಲಿಸಬೇಕಾಗಿರುತ್ತದೆ. ಅಪವಾದಾತ್ಮಕ ಸ್ಥಿತಿಯಲ್ಲಿ (ಉದಾ-ತಿಥೀಕ್ಷಯ) ಪಂಚಾಂಗವನ್ನು ನೋಡಿ ಬ್ರಹ್ಮಧ್ವಜವನ್ನು ನಿಲ್ಲಿಸಬೇಕು. ಎತ್ತರವಾಗಿರುವ ಬಿದಿರಿನ ತುದಿಗೆ ಹಳದಿ ಬಣ್ಣದ ಜರತಾರಿಯ ಬಟ್ಟೆಯನ್ನು ಕಟ್ಟುತ್ತಾರೆ. ಅದರ ಮೇಲೆ ಸಕ್ಕರೆಯ ಗಂಟು, ಬೇವಿನ ಚಿಗುರೆಲೆ, ಮಾವಿನ ಟೊಂಗೆ ಮತ್ತು ಕೆಂಪು ಹೂವುಗಳ ಹಾರವನ್ನು ಕಟ್ಟಿ ಮೇಲೆ ಬೆಳ್ಳಿಯ ಅಥವಾ ತಾಮ್ರದ ಕಲಶದಿಂದ ಶೃಂಗರಿಸಿ ಧ್ವಜವನ್ನು ನಿಲ್ಲಿಸುತ್ತಾರೆ. ಧ್ವಜವನ್ನು ಮುಖ್ಯದ್ವಾರದ ಎದುರಿಗೆ, ಹೊಸ್ತಿಲಿನ ಹತ್ತಿರ, ಬಲಭಾಗದಲ್ಲಿ (ಮನೆಯ ಒಳಗಿನಿಂದ ನೋಡುವಾಗ) ಭೂಮಿಯ ಮೇಲೆ ನಿಲ್ಲಿಸಬೇಕು. ಧ್ವಜವನ್ನು ಅತೀ ನೇರವಾಗಿ ನಿಲ್ಲಿಸದೇ ಮುಂದಿನ ಬದಿಗೆ ಸ್ವಲ್ಪ ಬಾಗಿದ ಸ್ಥಿತಿಯಲ್ಲಿ ನಿಲ್ಲಿಸಬೇಕು. ಅದರ ಮುಂದೆ ಸುಂದರವಾದ ರಂಗೋಲಿಯನ್ನು ಬಿಡಿಸಬೇಕು.

ಧ್ವಜಕ್ಕೆ 'ಬ್ರಹ್ಮಧ್ವಜಾಯ ನಮಃ' ಎಂದು ಹೇಳಿ ಸಂಕಲ್ಪಪೂರ್ವಕ ಪೂಜೆಯನ್ನು ಮಾಡಬೇಕು. ಸೂರ್ಯಾಸ್ತದ ಸಮಯದಲ್ಲಿ ಬೆಲ್ಲದ ನೈವೇದ್ಯವನ್ನು ತೋರಿಸಿ ಧ್ವಜವನ್ನು ಕೆಳಗಿಳಿಸಬೇಕು. ಯುಗಾದಿಯ ದಿನ ಬ್ರಹ್ಮಾಂಡದಲ್ಲಿನ ಪ್ರಜಾಪತಿ ದೇವತೆಯ ಲಹರಿಗಳು ಪೃಥ್ವಿಯ ಮೇಲೆ ಎಲ್ಲಕ್ಕಿಂತ 'ಚ್ಚು ಪ್ರಮಾಣದಲ್ಲಿ ಬರುತ್ತವೆ. ಬ್ರಹ್ಮಧ್ವಜದಿಂದಾಗಿ ವಾತಾವರಣದಲ್ಲಿನ ಪ್ರಜಾಪತಿ-ಲಹರಿಗಳು ಕಲಶದ ಸಹಾಯದಿಂದ ಮನೆಯೊಳಗೆ ಪ್ರವೇಶಿಸುತ್ತವೆ. (ಇದು ದೂರದರ್ಶನದ ಆಂಟೆನಾದಂತೆ ಕಾರ್ಯವನ್ನು ಮಾಡುತ್ತದೆ.) ಮರುದಿನದಿಂದ ಈ ಕಲಶವನ್ನು ನೀರು ಕುಡಿಯಲು ಉಪಯೋಗಿಸಬೇಕು. ಪ್ರಜಾಪತಿ-ಲಹರಿಗಳ ಸಂಸ್ಕಾರವಾಗಿರುವ ಕಲಶವು ಅದೇ ರೀತಿಯ ಸಂಸ್ಕಾರಗಳನ್ನು ಕುಡಿಯುವ ನೀರಿನ ಮೇಲೆ ಮಾಡುತ್ತದೆ, ಇದರಿಂದ ನಮಗೆ ವರ್ಷವಿಡೀ ಪ್ರಜಾಪತಿ-ಲಹರಿಗಳು ಪ್ರಾಪ್ತವಾಗುತ್ತವೆ.

ಧ್ವಜದ ಪೂಜೆಯನ್ನು ಮಾಡುತ್ತಿರುವಾಗ ಮಾಡಬೇಕಾದ ಪ್ರಾರ್ಥನೆ: 'ಹೇ ಬ್ರಹ್ಮದೇವ, ಹೇ ವಿಷ್ಣು, ಈ ಧ್ವಜದ ಮಾಧ್ಯಮದಿಂದ ವಾತಾವರಣದಲ್ಲಿ ವಿದ್ಯಮಾನವಾಗಿರುವ ಪ್ರಜಾಪತಿ, ಸೂರ್ಯ ಮತ್ತು ಸಾತ್ವಿಕ ಲಹರಿಗಳನ್ನು ನಾವು ಗ್ರಹಿಸುವಂತಾಗಲಿ. ಅದರಲ್ಲಿ ಸಿಗುವ ಶಕ್ತಿಯ ಚೈತನ್ಯವು ಸತತವಾಗಿರಲಿ. ನನಗೆ ಪ್ರಾಪ್ತವಾದ ಶಕ್ತಿಯು ಸಾಧನೆಗಾಗಿ ಉಪಯೋಗಿಸಲ್ಪಡಲಿ' ಇದೇ ನಿಮ್ಮ ಚರಣಗಳಲ್ಲಿ ಪ್ರಾರ್ಥನೆ.

ಧ್ವಜವನ್ನು ಕೆಳಗೆ ಇಳಿಸುವಾಗ ಮಾಡಬೇಕಾದ ಪ್ರಾರ್ಥನೆ: 'ಹೇ ಬ್ರಹ್ಮದೇವ, ಹೇ ವಿಷ್ಣು, ಇಂದು ದಿನವಿಡೀ ಈ ಧ್ವಜದಲ್ಲಿ ಸಂಗ್ರಹವಾದ ಶಕ್ತಿಯು ನನಗೆ ಸಿಗಲಿ. ಆ ಶಕ್ತಿಯು ರಾಷ್ಟ್ರ ಮತ್ತು ಧರ್ಮಕಾರ್ಯಕ್ಕೆ ಉಪಯೋಗವಾಗಲಿ' ಇದೇ ನಿಮ್ಮ ಚರಣಗಳಲ್ಲಿ ಪ್ರಾರ್ಥನೆ.

**– ವಿನೋದ ಕಾಮತ್.**
**ವಕ್ತಾರರು,ಸನಾತನ ಸಂಸ್ಥೆ.**

# ಮತದಾನ ಜಾಗೃತಿ ಪ್ರತಿಜ್ಞಾ ವಿಧಿ ಬೋಧನೆ




■ **ವಿಜಯಸಾಕ್ಷಿ ಸುದ್ದಿ, ಗದಗ**

ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಸಂಬಂಧ ಜಿಲ್ಲಾ ಸ್ವೀಪ್ ಸಮಿತಿ ಸಾರ್ವಜನಿಕರಿಗೆ ಕಡ್ಡಾಯ ಮತದಾನದ ಜಾಗೃತಿ ಮೂಡಿಸುವ ಪ್ರತಿಜ್ಞಾ ವಿಧಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಸಭಾಭವನದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಸಿ.ಬಿ. ದೇವರಮನಿ ಅವರು ಪ್ರತಿಜ್ಞಾ ವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್.ಎಸ್.ನೀಲಗುಂದ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಠೋಡ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ಶ್ರೀಮತಿ ಅರುಂದತಿ ಕುಲಕರ್ಣಿ ಸೇರಿದಂತೆ ಜಿಲ್ಲಾ ಸಮುದಾಯ ಆರೋಗ್ಯ ಅಧಿಕಾರಿಗಳು, ಆರೋಗ್ಯ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

# ಶ್ರೀ ಜಗದಂಬಾ ದೇವಿಯ ಪಾಲಕಿ ಉತ್ಸವ



■ **ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಮುಳಗುಂದ ನಾಕಾದ ಮರಾಠಾ ವಿದ್ಯಾ ವರ್ಧಕ ಸಂಘದ ವತಿಯಿಂದ ಏ.9ರ ರಾತ್ರಿ 8 ಗಂಟೆಗೆ ಸಂತ ಮಂಡಳಿಯಿಂದ ಭಜನೆಯೊಂದಿಗೆ ಪಾಲಕಿ ಸೇವೆ, ಮಹಾ ಮಂಗಳಾರತಿ, ನಂತರ ಪ್ರಸಾದ ಸೇವೆ ಜರುಗಲಿದೆ.

ಈ ವಾರದ ಪಾಲಕಿ ಸೇವೆಯನ್ನು ಶ್ರೀ ಅರುಣ ಯಲ್ಲಪ್ಪ ಗ್ವಾರಿ ಇವರ ವತಿಯಿಂದ ನೇರವೇರಿಸಲಾಗುವದು. ಸಮಾಜ ಬಾಂಧವರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಎಲ್ಲರೂ ಶ್ರೀದೇವಿಯ ಕೃಪೆಗೆ ಪಾತ್ರರಾಗಲು ಸಂಘದ ಅಧ್ಯಕ್ಷ ವಿನಿತಕುಮಾರ ವ್ಹಿ.ಜಗತಾಪ, ಗೌರವ ಕಾರ್ಯದರ್ಶಿ ಶಿವಾಜಿ ವಾಯ್.ಗ್ವಾರಿ ಪ್ರಕಟಣೆ ಮೂಲಕ ವಿನಂತಿಸಿದ್ದಾರೆ.

# ಪಪ್ಪಾಯ ಬೆಳೆಯಲ್ಲಿ ಲಾಭ ಕಂಡ ರೈತ



■ **ವಿಜಯಸಾಕ್ಷಿ ಸುದ್ದಿ, ಧಾರವಾಡ**

ತಾಲೂಕಿನ ಮಾದನಭಾವಿ ಗ್ರಾಮ ಪಂಚಾಯತ ವ್ಯಾಪ್ತಿಯ ಮಾದನಭಾವಿ ಗ್ರಾಮದವರಾದ 28 ವರ್ಷ ವಯಸ್ಸಿನ ದಯಾನಂದ ಹೊಳೆಹಡಗಲಿ, ಕೃಷಿಯಲ್ಲಿ ಅಪಾರವಾದ ಆಸಕ್ತಿ ಹೊಂದಿದ್ದಾರೆ. ಅವರು ಮೊದಲು ತಮ್ಮ ಜಮೀನಿನಲ್ಲಿ ಕಬ್ಬಿನ ಬೇಸಾಯ ಮಾಡುತ್ತಿದ್ದರು. ಆದರೆ ವರ್ಷದಿಂದ ವರ್ಷಕ್ಕೆ ಕಬ್ಬಿನ ಬೆಳೆಯ ಇಳುವರಿ ಕಡಿಮೆಯಾಗುತ್ತಾ ಬರುತ್ತಿರುವುದರಿಂದ ಅವರಿಗೆ ಕಬ್ಬಿನ ಕೃಷಿಯಲ್ಲಿ ಆಸಕ್ತಿ ಕಡಿಮೆಯಾಗಿತ್ತು.

ಇದರಿಂದಾಗಿ ನಷ್ಟವನ್ನು ಅನುಭವಿಸುತ್ತಿರುವುದರಿಂದ ಹಾಗೂ ಕಬ್ಬಿನ ಬೆಳೆಗೆ ಪರ್ಯಾಯವಾಗಿ ಬೇರೆ ಬೆಳೆಯನ್ನು ಬೆಳೆಯಬೇಕೆಂದು ತೀರ್ಮಾನಿಸಿದರು. ಒಂದು ದಿನ ಫಲಾನುಭವಿಯು ಗ್ರಾಮ ಪಂಚಾಯತಿಯಲ್ಲಿ ಆಯೋಜಿಸಿದ್ದ ಗ್ರಾಮ ಸಭೆಯಲ್ಲಿ ಭಾಗವಹಿಸಿ, ತೋಟಗಾರಿಕೆ ಇಲಾಖೆ ಸಿಬ್ಬಂದಿಗಳಿಂದ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ತೆ-ೋಟಗಾರಿಕೆ ಬೆಳೆಗಳನ್ನು ಬೆಳೆಯಲು ಇರುವ ಸೌಲಭ್ಯಗಳ ಬಗ್ಗೆ ಮಾಹಿತಿಯನ್ನು ಪಡೆದು-ಕೊಂಡು, ನಂತರ ಪಪ್ಪಾಯ ಬೆಳೆಯನ್ನು ಬೆಳೆಯಲು ಉತ್ಸಾಹಕರಿರುವುದಾಗಿ ತಿಳಿಸಿ, ಪಪ್ಪಾಯಿ ಬೇಸಾಯದ ಬಗ್ಗೆ ಮಾಹಿತಿಯನ್ನು ಪಡೆದಕೊಂಡರು.

ಗ್ರಾಮ ಸಭೆಯಲ್ಲಿ ಆಯ್ಕೆಯಾಗಿ ನವೆಂಬರ್ 2023ರಲ್ಲಿ 0.6 ಹೆಕ್ಟಾರ್ ಪ್ರದೇಶದಲ್ಲಿ ಪಪ್ಪಾಯಿ ಬೆಳೆಯನ್ನು ಬೆಳೆದು 37,604 ರೂ ಕೂಲಿ ಮೊತ್ತದ ಸೌಲಭ್ಯವನ್ನು ಪಡೆದರು. ಜನೇವರಿ 2024ರಿಂದ ಮಾರ್ಚ 2024ರ ಅವಧಿಯಲ್ಲಿ ತಿಂಗಳಿಗೆ 2 ಬಾರಿ ಕಟಾವು ಮಾಡಿ, 20 ಟನ್ ಇಳುವರಿ ಪಡೆದಿದ್ದಾರೆ.

ಮಾರುಕಟ್ಟೆಯ ಬೆಲೆ ಪ್ರತಿ ಕೆ.ಜಿಗೆ 12 ರೂ.ನಂತೆ 20 ಟನ್‌ಗೆ ಸುಮಾರು 2,40,000 ಆದಾಯ ಪಡೆದಿದ್ದಾರೆ.

# ಮತದಾನದಿಂದ ಯಾರೂ ಹೊರಗುಳಿಯಬಾರದು




■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ವಿಶ್ವದಲ್ಲೇ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ಹೊಂದಿದ ದೇಶ ನಮ್ಮದಾಗಿದ್ದು, ದೇಶದಲ್ಲಿಯ ಜನತೆಗೆ ಸಂವಿಧಾನವು ಮತದಾನ ಎಂಬ ವಿಶೇಷ ಹಕ್ಕನ್ನು ನೀಡಿದೆ. ಸಂವಿಧಾನ ನೀಡಿದ ಈ ಹಕ್ಕನ್ನು 18 ವರ್ಷ ವಯೋಮಿತಿ ಮೀರಿದ ಎಲ್ಲ ಅರ್ಹ ಮತದಾರರು ಮೇ.7ರಂದು ನಡೆಯುವ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ತಪ್ಪದೇ ಮತದಾನ ಮಾಡಬೇಕು. ಇದು ಎಲ್ಲರ ಹಕ್ಕು ಮತ್ತು ಕರ್ತವ್ಯ ಕೂಡ ಆಗಿದೆ ಎಂದು ತಾಲೂಕಾ ಆರೋಗ್ಯಾಧಿಕಾರಿ ಡಾ. ಸುಭಾಸ್ ದೈಗೊಂಡ ಹೇಳಿದರು.

ಸೋಮವಾರ ಶಿರಹಟ್ಟಿಯಲ್ಲಿ ಆರೋಗ್ಯ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಜಾಥಾಕ್ಕೆ ತಾಲೂಕಾ ಆಸ್ಪತ್ರೆಯಿಂದ ಚಾಲನೆ ನೀಡಿ ಅವರು ಮಾತನಾಡಿದರು.

ಎಲ್ಲ ಅರ್ಹ ಮತದಾರರು ಚುನಾವಣೆಯಲ್ಲಿ ಕಡ್ಡಾಯವಾಗಿ ಮತಗಟ್ಟೆ ಕೇಂದ್ರಕ್ಕೆ ಹೋಗಿ ಮತ ಚಲಾಯಿಸುವುದರ ಮೂಲಕ ಸುಭದ್ರ ದೇಶ ನಿರ್ಮಿಸೋಣ. ಮತದಾನ ದಿನದಂದು ಸಮಯ ವ್ಯರ್ಥ ಮಾಡದೆ ಚುನಾವಣಾ ಆಯೋಗ ನಿಗದಿಪಡಿಸಿದ ದಾಖಲೆ ತೆ-ಗೆದುಕೊಂಡು ತೆರಳಿ ಮತ ಚಲಾಯಿಸಿ ಶೇ.100ರಷ್ಟು ಮತದಾನವಾಗುವುದಕ್ಕೆ ಎಲ್ಲ ಮತದಾರರು ಭಾಗಿಯಾಗಬೇಕು. ಒಂದೊಂದು ಮತವು ಸಹ ಶ್ರೇಷ್ಠವಾಗಿದ್ದು, ಮತದಾರರ ಪಟ್ಟಿಯಲ್ಲಿರುವ ಯಾರೂ ಸಹ ಮತದಾನದಿಂದ ಹೊರಗುಳಿಯಬಾರದು ಎಂದರು.

ತಾಲೂಕಾ ಆಸ್ಪತ್ರೆಯಿಂದ ಬಸವೇಶ್ವರ ವೃತ್ತ, ಬಜಾರ ವೃತ್ತ, ನೆಹರು ವೃತ್ತ, ಬಸ್ ನಿಲ್ದಾಣ ಸೇರಿದಂತೆ ಪ್ರಮುಖ ಬೀದಿಗಳಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ ನಡೆಯಿತು. ತಾ.ಪಂನ ಅಶೋಕ ಧನವೆ, ಜಗದೀಶ ಕೋಡಿಹಳ್ಳಿ, ಎಂ.ಆರ್. ಹುರುಳಿಕುಪ್ಪಿ, ಎಂ.ಜಿ. ಚನ್ನಮ್ಮನವರ, ಲಿಂಗರಾಜ ನಾರ್ಶಿ, ಮಾಂತೇಶ ತಿಮ್ಮಾಪೂರ ಮತ್ತು ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಮಾದನಬಾವಿಯಲ್ಲಿ ಅಂದವಾದ ಕೂಸಿನ ಮನೆ



■ **ವಿಜಯಸಾಕ್ಷಿ ಸುದ್ದಿ, ಧಾರವಾಡ**

ಸೆ.21, 2022ರಂದು ಪ್ರಾರಂಭವಾದ ಮಾದನಭಾವಿ ಗ್ರಾಮ ಪಂಚಾಯತಿ ಶಿಶುಪಾಲನಾ ಕೇಂದ್ರದಲ್ಲಿ 10 ಜನ ಕೆಲಸದವರಿದ್ದು, ಅವರಿಗೆ ತರಬೇತಿಯನ್ನೂ ನೀಡಲಾಗಿದೆ. 6 ತಿಂಗಳಿನಿಂದ 3 ವರ್ಷದ ಒಳಗಿನ ಮಕ್ಕಳನ್ನು ದಾಖಲಾತಿ ಮಾಡಿಕೊಂಡು ನರೇಗಾ ಕೂಲಿಕಾರರು ಕೆಲಸಕ್ಕೆ ಹೋದಾಗ ಶಿಶುಪಾಲನಾ ಕೇಂದ್ರಕ್ಕೆ ತಮ್ಮ ಮಕ್ಕಳನ್ನು ಬಿಟ್ಟು ಹೋಗಬಹುದು ಎಂದು ಜಿಲ್ಲಾ ಪಂಚಾಯತ ಸಿಇಓ ಸ್ವರೂಪ ಟಿ.ಕೆ. ತಿಳಿಸಿದ್ದಾರೆ.

ಮಕ್ಕಳನ್ನು ಸರಿಯಾದ ರೀತಿಯಲ್ಲಿ ನೋಡಿಕೊಂಡು, ಸರಿಯಾದ ಆಹಾರ ಕ್ರಮವನ್ನು ಅನುಸರಿಸಿ ಮಕ್ಕಳಿಗೆ ನೀಡಲಾಗುತ್ತದೆ. ಇದರಿಂದ ನರೇಗಾ ಕೂಲಿಕಾರರಿಗೆ ಕೆಲಸ ಮಾಡಲು ಅನುಕೂಲವಾಗುತ್ತದೆ. ಅವರಿಗೆ ನರೇಗಾ ಯೋಜನೆಯಡಿ 100 ದಿನಗಳ ಕೂಲಿ ಮೊತ್ತವನ್ನು ಪಾವತಿಸಲಾಗುತ್ತದೆ.

ಮನೆಯಲ್ಲಿ ಮಕ್ಕಳನ್ನು ನೋಡಿಕೊಳ್ಳಲು ಯಾರೂ ಇಲ್ಲದಿರುವಾಗ ಈ ಕೂಸಿನ ಮನೆ ಸಹಾಯವಾಗುತ್ತದೆ. ಅದೇ ರೀತಿ ಮಕ್ಕಳಿಗೆ ಆಟದ ಚಟುವಟಿಕೆಗಳನ್ನು ಸಹ ಮಾಡಲಾಗುತ್ತದೆ. ನರೇಗಾ ಕೂಲಿಕಾರರಿಗೆ ಇದು ತುಂಬಾ ಅನುಕೂಲವಾಗಿದೆ.

ಜಿಲ್ಲೆಯಲ್ಲಿ ಒಟ್ಟು 102 ಕೂಸಿನ ಮನೆಗಳನ್ನು ತೆರೆಯಲಾಗಿದ್ದು, ಈ ಎಲ್ಲಾ ಕೂಸಿನ ಮನೆಗಳಿಗೆ ಅನುದಾನ, ಸ್ವಂತ ಕಟ್ಟಡ, ಆಟದ ಸಾಮಾನು, ಅಗತ್ಯ ಪರಿಕರಗಳನ್ನು ಪೂರೈಸಲಾಗಿದೆ. ಕೂಸಿನ ಮನೆಯಲ್ಲಿ ಮಕ್ಕಳನ್ನು ನೋಡಿಕೊಳ್ಳಲು ತರಬೇತಿ ಹೊಂದಿದ 1020 ಜನ ಮಹಿಳಾ ಕೇರ್‌ಟೇಕರ್ಸ್‌ಗಳನ್ನು ನೇಮಿಸಲಾಗಿದೆ.

102 ಕೂಸಿನ ಮನೆಗಳಲ್ಲಿ 561 ಬಾಲಕರು ಮತ್ತು 577 ಬಾಲಕಿಯರು ಸೇರಿ ಒಟ್ಟು 1138 ಮಕ್ಕಳು ದಾಖಲಾಗಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.



ಮುಳಗುಂದ ಪಟ್ಟಣ ಸಮೀಪದ ಸೊರಟೂರ ಗ್ರಾಮದ ಬಿಜೆಪಿ ಕಾರ್ಯಕರ್ತರ ಮನೆಯ ಮೇಲೆ ಪಕ್ಷದ ಧ್ವಜ ಹಾರಿಸುವ ಮೂಲಕ ಬಿಜೆಪಿ 44ನೇ ಸಂಸ್ಥಾಪನಾ ದಿನಾಚರಣೆ ಆಚರಿಸಲಾಯಿತು. ಮಾಹಾಂತೇಶ ಘೋಡಕೆ, ಪ್ರಕಾಶ ಹಿರೇಮಠ, ವಾಯ್.ಪಿ. ಅಡ್ನೂರ, ಮಾಹಾದೇವಪ್ಪ ಹಡಪದ, ಯಲ್ಲಪ್ಪ ಮುಂತಾದವರಿದ್ದರು.

# ಮೂರ್ತಿ ಪುನರ್ ಪ್ರತಿಷ್ಠಾಪನಾ ಕಾರ್ಯಕ್ರಮ



■ **ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಚಿಕ್ಕಹಂದಿಗೋಳ ಗ್ರಾಮದಲ್ಲಿ ಅನ್ನಪೂರ್ಣೇಶ್ವರಿ ದೇವಿ ಮತ್ತು ಭೀಮಾಂಬಿಕಾ ದೇವಿಯ ಮೂರ್ತಿ ಪುನರ್ ಪ್ರತಿಷ್ಠಾಪನಾ ಕಾರ್ಯಕ್ರಮ ಅಡ್ನೂರು ಬ್ರಹನ್ಮಠದ ಪೂಜ್ಯ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳ ನೇತೃತ್ವದಲ್ಲಿ ಅದ್ದೂರಿಯಾಗಿ ಜರುಗಿತು.

ಏ.3ರಂದು ಗ್ರಾಮದ ಹೊರ ವಾಸ್ತವ್ಯ ಗ್ರಾಮದೇವತೆಯ ಕಟ್ಟಿ ಕಾರ್ಯಕ್ರಮದಲ್ಲಿ ಪ್ರವಚನ, ಭಜನೆ, ಡೊಳ್ಳು ಹಾಗೂ ಜಾಗರಣೆ ಸೇರಿದಂತೆ ವಿವಿಧ ಕಾರ್ಯಗಳು ನೆರವೇರಿದವು. ಏ4ರಂದು ಮೌನೇಶ್ವರ ಸ್ವಾಮಿಗಳು ಉಲಗೂರ ಇವರಿಂದ ಬ್ರಾಹ್ಮಿ ಮೂರ್ತದಲ್ಲಿ ಗಣಹೋಮ ನಂತರ ಸಕಲ ಮಂಗಲ ವಾದ್ಯಮೇಳದೊಂದಿಗೆ ಮೆರವಣಿಗೆ, ಪುರ ಪ್ರವೇಶ ಹಾಗೂ ಗೋಧೂಳಿ ಮುಹೂರ್ತದಲ್ಲಿ ಗದ್ದುಗೆಗೆ ಮೂರ್ತಿಗಳ ಪುನರ್ ಜೋಡಣೆ ಕಾರ್ಯಕ್ರಮ ಜರುಗಿತು.

ಏ.5ರಂದು ಬ್ರಾಹ್ಮಿ ಮೂರ್ತದಲ್ಲಿ ಚಂಡಿಕಾ ಹೋಮ-ಹವನ ನಂತರ ಉಡಿ ತುಂಬುವ ಕಾರ್ಯಕ್ರಮ ನೆರವೇರಿತು. ಚಿಕ್ಕಹಂದಿಗೋಳ ಗ್ರಾಮದ ಸಮಸ್ತ ಸದ್ಭಕ್ತರು ಪಾಲ್ಗೊಂಡು ದೇವಿಯ ಕೃಪೆಗೆ ಪಾತ್ರರಾದರು.

# ನರೇಗಾ ಕೂಲಿಕಾರರಿಗೆ ಮತದಾನ ಜಾಗೃತಿ




■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮತದಾನದ ಹಕ್ಕನ್ನು ಹೊಂದಿರುವ ಪ್ರತಿಯೊಬ್ಬರೂ ಯಾವುದೇ ನಕಾರಾತ್ಮಕ ಮನೋಭಾವ ತೋರದೆ ಚುನಾವಣೆಯಲ್ಲಿ ಸಕ್ರಿಯರಾಗಿ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಿ, ಮತ ಚಲಾಯಿಸಿದಾಗ ಮಾತ್ರ ಸದೃಢ ಪ್ರಜಾಪ್ರಭುತ್ವ ನಿರ್ಮಾಣ ಸಾಧ್ಯ ಎಂದು ಗಜೇಂದ್ರಗಡ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಾ. ಡಿ. ಮೋಹನ್ ಹೇಳಿದರು.

ಅವರು ನಿಡಗುಂದಿ ಗ್ರಾ.ಪಂ ವ್ಯಾಪ್ತಿಯ ನಿಡಗುಂದಿಕೊಪ್ಪ ಗ್ರಾಮದಲ್ಲಿ ನರೇಗಾ ಕೂಲಿಕಾರರಿಂದ ನಡೆದಿರುವ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ವೀಕ್ಷಣೆ ನಂತರ ಮತದಾನ ಜಾಗೃತಿ ಕೈಗೊಂಡರು.

ಮೇ 7ಕ್ಕೆ ಲೋಕಸಭಾ ಚುನಾವಣೆ ನಡೆಯಲಿದ್ದು, ಎಲ್ಲಾ ಕೂಲಿಕಾರ ಮತದಾರರು ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ನಿಮ್ಮ ಹಕ್ಕನ್ನು ಚಲಾಯಿಸಬೇಕು. ಸಂವಿಧಾನದ ಪಾವಿತ್ರ್ಯತೆ, ಮಹತ್ವ ಅರಿಯದ ಹಲವರು ಮತದಾನದಲ್ಲಿ ಪಾಲ್ಗೊಳ್ಳದೆ ಇರುವುದರಿಂದ ಉತ್ತಮ ಅಭ್ಯರ್ಥಿಯನ್ನು ಚುನಾಯಿಸುವ ಸುವರ್ಣಾವಕಾಶಗಳು ಕೈ ತಪ್ಪುತ್ತವೆ. ಆದ್ದರಿಂದ ಸಂವಿಧಾನದತ್ತವಾಗಿ 18 ವರ್ಷ ತುಂಬಿದ ಭಾರತೀಯನಿಗೆ ದೊರೆತಿರುವ ಪವಿತ್ರವಾದ ಮತಯಿದಾನ ಹಕ್ಕನ್ನು ಸಮರ್ಥವಾಗಿ ಬಳಸಿಕೊಂಡು ಮತದಾನ ಮಾಡುವ ಅಗತ್ಯವಿದೆ ಎಂದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕ ಬಸವರಾಜ ಬಡಿಗೇರ, ತಾಂತ್ರಿಕ ಸಂಯೋಜಕಿ ಪ್ರಿಯಾಂಕಾ ಅಂಗಡಿ, ಐಇಸಿ ಸಂಯೋಜಕ ಮಂಜುನಾಥ ಹಳ್ಳದ, ಟಿಎಇ ಪ್ರವೀಣ ದೂಳಣ್ಣವರ, ಬಿಎಫ್‌ಟಿ ಚಂದ್ರಕಾಂತ ಲಮಾಣಿ, ಎಸ್‌ಡಿಎ ಶರಣಪ್ಪ ಮೇಟಿ, ಡಿಇಒ ಮಲ್ಲೇಶ ತಳವಾರ, ಮುತ್ತಣ್ಣ ಸೇರಿದಂತೆ ಇನ್ನಿತರರು ಇದ್ದರು.

**ಮುತ್ತಿನಪುರ ವೀರಭದ್ರೇಶ್ವರ ಕ್ಷೇತ್ರದಲ್ಲಿ ಮಂಡಲ ಪೂಜಾ**

# ದಾರಿ ತಪ್ಪಿದರೂ ಬಾಯಿ ತಪ್ಪಬಾರದು



■ **ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು**

ಮಾತಿಗೆ ಒಂದು ಅರ್ಥ ಇದ್ದರೆ ಮೌನಕ್ಕೆ ಹಲವು ಅರ್ಥ. ಮಾತೆಂಬುದು ಜ್ಯೋತಿರ್ಲಿಂಗ. ದಾರಿ ತಪ್ಪಿದರೆ ಮರಳಿ ಸರಿ ದಾರಿಯಲ್ಲಿ ಸಾಗಬಹುದು. ಬಾಯಿ ತಪ್ಪಿ ವಚನ ಭ್ರಷ್ಟರಾದರೆ ಮನುಷ್ಯನ ವ್ಯಕ್ತಿತ್ವಕ್ಕೆ ಗೌರವ ಸಿಗಲಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಮುತ್ತಿನಪುರ ವೀರಭದ್ರೇಶ್ವರ ಕ್ಷೇತ್ರದಲ್ಲಿ ಮಂಡಲ ಪೂಜಾ ನಿಮಿತ್ತ ಜರುಗಿದ ಇಷ್ಟಲಿಂಗ ಮಹಾಪೂಜಾ ನೆರವೇರಿಸಿದ ನಂತರ ನಡೆದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.


ಜೀವನದಲ್ಲಿ ಗೆಲ್ಲುತ್ತಾ ಹೋಗುವವನು ಇತಿಹಾಸವನ್ನು ಸೃಷ್ಟಿಸುತ್ತಾನೆ. ಸೋತು ಗೆಲ್ಲುವವನು ಇತಿಹಾಸವನ್ನೇ ಬದಲಾಯಿಸುತ್ತಾನೆ. ಹೃದಯವಂತರ ಹತ್ತಿರ ಮೌನದಿಂದಿರಬೇಕು. ಮೂರ್ಖರ ಸಂಪರ್ಕದಿಂದ ದೂರದಲ್ಲಿರಬೇಕು. ಆಗಲೇ ಮೌನಕ್ಕೊಂದು ಅರ್ಥ ಮಾತಿಗೊಂದು ಬೆಲೆ ಬರುತ್ತದೆ. ಎಷ್ಟೇ ಒಳ್ಳೆಯವರಾದರೂ ಚುಚ್ಚು ಮಾತನಾಡುವ ಜನರು ಇದ್ದೇ ಇರುತ್ತಾರೆಂದು ಬೇಸರ ಪಟ್ಟುಕೊಳ್ಳಬಾರದು. ಸೂಜಿಯಿಂದ ಹೂವನ್ನು ಪೋಣಿಸುವಾಗ ಹೂವು ನೋವು ಅನುಭವಿಸುವುದು. ನೋವು ಸಹಿಸಿಕೊಂಡಾಗ ಅದು ದೇವರಿಗೆ ಮಾಲೆಯಾಗಿ ಸಮರ್ಪಿತಗೊಳ್ಳುತ್ತದೆ.

ಸಂಸ್ಕಾರವಂತ ಸಜ್ಜನರಿಂದ ನಮ್ಮ ಬಾಳ ಬದುಕು ಉಜ್ವಲಗೊಳ್ಳುತ್ತದೆ. ದುಷ್ಟರ ಸಂಹಾರ ಶಿಷ್ಟರ ಸಂರಕ್ಷಣೆಗಾಗಿ ಶ್ರೀ ವೀರಭದ್ರಸ್ವಾಮಿಯ ಅವತಾರಗೊಂಡಿರುವುದು ಸರ್ವರಿಗೂ ವೇದ್ಯ. ಮುತ್ತಿನಪುರ ಶ್ರೀ ವೀರಭದ್ರೇಶ್ವರ ದೇವಸ್ಥಾನ ಪುರಾತನವಾಗಿದ್ದು, ಅತ್ಯಂತ ಜೀರ್ಣಗೊಂಡಿತ್ತು. ಈ ಮಲೆನಾಡು ಪ್ರಾಂತ್ಯದ ಎಲ್ಲಾ ಭಕ್ತರ ಸಹಕಾರದಿಂದ ಭವ್ಯ ಸುಂದರ ಶಿಲಾ ದೇಗುಲ ನಿರ್ಮಾಣ ಮಾಡಿರುವುದು ತಮಗೆ ಅತ್ಯಂತ ಸಂತೋಷ ತಂದಿದೆ ಎಂದರು.

ಸಮಾರಂಭದಲ್ಲಿ ಪಾಲ್ಗೊಂಡ ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು, ಕೆ.ಬಿದರೆ ಪ್ರಭುಕುಮಾರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿದರು. ಚಿ.ಸ. ಪ್ರಭುಲಿಂಗಶಾಸ್ತ್ರಿಗಳು ಸ್ವಾಗತಿಸಿದರು. ಹುಣಸಘಟ್ಟದ ಹಾಲಸ್ವಾಮಿ ಮಠದ ಗುರುಮೂರ್ತಿ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು.

ಕ್ಷೇತ್ರಕ್ಕೆ ಆಗಮಿಸಿದ ಜಗದ್ಗುರುಗಳನ್ನು ಮಂಗಲ ವಾದ್ಯ, ಕಳಸ-ಕನ್ನಡಿ, ಪೂರ್ಣ ಕುಂಭದೊಂದಿಗೆ ಭಕ್ತಿಯಿಂದ ಬರಮಾಡಿಕೊಂಡರು.

# ಬೇಸಿಗೆ ಶಿಬಿರಗಳಿಂದ ಬೌದ್ಧಿಕ ಪ್ರಬುದ್ಧತೆ




■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಇಲ್ಲಿನ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಬೇಸಿಗೆ ಶಿಬಿರದ ಅಂಗವಾಗಿ ರಜಾ ದಿನಗಳ ಮಜಾ ಅನುಭವಿಸಲು ಮಕ್ಕಳಿಗೆ ಉಚಿತವಾಗಿ 10 ದಿನಗಳ ಪರ್ಯಂತ ಶ್ಲೋಕ, ವಚನಗಳು, ನೀತಿ ಕತೆ, ಯೋಗ ಮತ್ತು ಸಾಂಸ್ಕೃತಿಕ ಚಟುವಟಿಕೆಗಳು ಸೇರಿದಂತೆ ವಿವಿಧ ಚಟುವಟಿಕೆಗಳಲ್ಲಿ ತರಬೇತಿ ನೀಡಲಾಯಿತು.

ಸಂಚಾಲಕಿ ಬಿ.ಕೆ. ಸವಿತಕ್ಕ ಮಕ್ಕಳನ್ನುದ್ದೇಶಿಸಿ ಮಾತನಾಡಿ, ಮಕ್ಕಳ ಕಲಿಕೆಯ ಜೊತೆಗೆ ಪಠ್ಯೇತರ ಚಟುವಟಿಕೆಗಳ ಮೂಲಕ ಅವರಲ್ಲಿರುವ ಸುಪ್ತ ಪ್ರತಿಭೆಯನ್ನು ಹೊರಹಾಕಲು ಮಕ್ಕಳಿಗೆ ಇಂತಹ ತರಬೇತಿಗಳನ್ನು ಬೇಸಿಗೆ ರಜಾ ದಿನಗಳಲ್ಲಿ ನಡೆಸಲಾಗುತ್ತದೆ. ಶೈಕ್ಷಣಿಕ ಪ್ರಗತಿಯೊಂದಿಗೆ ಬೌದ್ಧಿಕವಾಗಿಯೂ ಪ್ರಬುದ್ಧತೆ ಹೊಂದಲು ಶಿಕ್ಷಕ ಮತ್ತು ಪಾಲಕರ ಮಾರ್ಗದರ್ಶನದೊಂದಿಗೆ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆಯಲು ಸಾಧ್ಯ. ಬೇಸಿಗೆ ರಜೆಯಲ್ಲಿ ತಿಂಗಳ ಪರ್ಯಂತರ ಕಾಲಹರಣ ಮಾಡುವ ಬದಲು ಮಕ್ಕಳಿಗೆ ಇಂತಹ ಚಟುವಟಿಕೆಗಳ ಮೂಲಕ ಪ್ರೋತ್ಸಾಹಿಸಿ ಪೋಷಿಸುವುದೇ ನಮ್ಮ ಸಂಸ್ಥೆಯ ಆದ್ಯತೆಯಾಗಿದೆ. ಇದಕ್ಕೆ ಪಾಲಕರೂ ಸಹ ಆದ್ಯತೆ ನೀಡುವದರಿಂದ ಮಕ್ಕಳು ಬೌದ್ಧಿಕವಾಗಿ ವಿಕಾಸ ಹೊಂದಲು ಕಾರಣವಾಗಲಿದೆ ಎಂದು ತಿಳಿಸಿದರು.

**ಕಸಾಪ ವತಿಯಿಂದ ಯುಗಾದಿ ಅಂಗವಾಗಿ 'ಹಾಸ್ಯ-ಲಾಸ್ಯ' ಕಾರ್ಯಕ್ರಮ**

# ಆರೋಗ್ಯಯುತ ಬದುಕಿಗೆ ನಗೆ ದಿವ್ಯೌಷಧ




ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯರಾಗಿ ನೇಮಕಗೊಂಡ ನಿಮಿತ್ತ ಶಂಕ್ರಣ್ಣ ಸಂಕಣ್ಣವರ, ಸಾಹಿತ್ಯ ಕ್ಷೇತ್ರದ ಸೇವೆಗೆ 'ಕಿತ್ತೂರ ಚನ್ನಮ್ಮ' ಪ್ರಶಸ್ತಿ ಪಡೆದ ನಿಮಿತ್ತ ವಿ.ವಿ. ಹಿರೇಮಠ ಇವರನ್ನು ಪರಿಷತ್ತಿನ ಪರವಾಗಿ ಸನ್ಮಾನಿಸಲಾಯಿತು. ನಿವೃತ್ತ ಅಧ್ಯಾಪಕರು ಹಾಗೂ ಚಿಂತಕರಾದ ಎನ್.ಎಚ್. ಹಿರೇಸಕ್ಕರಗೌಡರ ವೇದಿಕೆ ಮೇಲೆ ಉಪಸ್ಥಿತರಿದ್ದರು.

■ **ವಿಜಯಸಾಕ್ಷಿ ಸುದ್ದಿ, ಗದಗ**

ಮನುಷ್ಯ ಆಸೆಗಳು ಅಪರಿಮಿತವಾಗಿ ಬೆಳೆಯುತ್ತಿರುವ ಸಂದರ್ಭದಲ್ಲಿ ಒತ್ತಡಕ್ಕೆ ಒಳಗಾಗಿ ಮನಸ್ಸಿನ ನೆಮ್ಮದಿಯನ್ನು ಕಳೆದುಕೊಂಡಿದ್ದಾರೆ. ಸಂತೆಯಲ್ಲೂ ಒಂಟಿತನ ಕಾಡುವ ಈ ದಿನಮಾನದಲ್ಲಿ ಎಲ್ಲ ಇದ್ದು ಇಲ್ಲದಂತಾಗಿರುವ ಪರಿಸ್ಥಿತಿಯಲ್ಲಿ ನಾವಿದ್ದೇವೆ. ಪರಸ್ಪರ ಮಾತುಕತೆ, ಚರ್ಚೆ, ಹಾಸ್ಯದ ಮೂಲಕ ಮನಸ್ಸನ್ನು ಹಗುರವಾಗಿಸಬಹುದು. ನಗೆ ಮುಖದ ನರನಾಡಿಗಳನ್ನು ಉದ್ದೀಪನಗೊಳಿಸುವದರ ಜೊತೆಗೆ ಮನಸ್ಸನ್ನು ಉಲ್ಲಸಿತ ಸ್ಥಿತಿಯಲ್ಲಿಡುತ್ತದೆ. ಆರೋಗ್ಯದ ಬದುಕಿಗೆ ನಗೆ ದಿವ್ಯ ಔಷಧಿಯಾಗಿದೆ ಎಂದು ನರೇಗಲ್ಲದ ನಗೆ ಭಾಷಣಕಾರ ಅರುಣ ಕುಲಕರ್ಣಿ ಅಭಿಪ್ರಾಯಪಟ್ಟರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗ ವತಿಯಿಂದ ಕಸಾಪ ಕಾರ್ಯಾಲಯದ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ಯುಗಾದಿ ಅಂಗವಾಗಿ ಜರುಗಿದ "ಹಾಸ್ಯ-ಲಾಸ್ಯ' ಕಾರ್ಯಕ್ರಮದಲ್ಲಿ ಮಾತನಾಡಿದರು.

ಬದುಕಿನ ಅನೇಕ ಸಂದರ್ಭಗಳಲ್ಲಿ ಹಾಸ್ಯ ಸಹಜವಾಗಿ ಹಾಸುಹೊಕ್ಕಾಗಿದೆ. ಅದನ್ನು ಪೂರ್ಣ ಮನಸ್ಸಿನಿಂದ ಆಸ್ವಾದಿಸುವ ಗುಣವನ್ನು ಹೊಂದುವ ಅಗತ್ಯವಿದೆ ಎಂದು ತಿಳಿಸಿ, ಅನೇಕ ಹಾಸ್ಯ ಪ್ರಸಂಗಗಳನ್ನು ಪ್ರಸ್ತುತಪಡಿಸಿ ನಗೆಗಡಲಲ್ಲಿ ತೇಲಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸಿ ಮಾತನಾಡಿ, ಬೀಚಿ ಅವರು ತಮ್ಮ ಹಾಸ್ಯ ಸಾಹಿತ್ಯದ ಮೂಲಕ ಕನ್ನಡಕ್ಕೆ ಹೊಸತನವನ್ನು ತಂದಿದ್ದಾರೆ. ಮನುಷ್ಯ ನಗುವನ್ನು ಮರೆತಿರುವದರಿಂದಲೇ ನಗೆ ಕ್ಲಬ್‌ಗಳು ಹುಟ್ಟಿಕೊಂಡಿವೆ. ನಗುವಿನಲ್ಲಿ ಮೈಮರೆಯುವ ಸಂದರ್ಭವೂ ಒಂದು ಯೋಗ ಮತ್ತು ಧ್ಯಾನವಾಗಿದೆ ಎಂದರು.

ಕಿಶೋರಬಾಬು ನಾಗರಕಟ್ಟ ಸ್ವಾಗತಿಸಿದರು. ಶ್ರೀಕಾಂತ ಬಡ್ಡೂರ ನಿರೂಪಿಸಿದರು. ಶಿವಾನಂದ ಗಿಡ್ನಂದಿ ವಂದಿಸಿದರು.

ಕಾರ್ಯಕ್ರಮದಲ್ಲಿ ಪ್ರೊ. ಚಂದ್ರಶೇಖರ ವಸ್ತ್ರದ, ಡಾ. ಜಿ.ಬಿ. ಪಾಟೀಲ, ಸಿಎಂ ಮಾರನಬಸರಿ, ಎಸ್.ಎಂ. ಕಾತರಕಿ, ರತ್ನಕ್ಕ ಪಾಟೀಲ, ಪ್ರ.ತೋ ನಾರಾಯಣಪುರ, ಮಂಜುಳಾ ವೆಂಕಟೇಶಯ್ಯ, ಶಿವಾನಂದ ಭಜಂತ್ರಿ, ಶಶಿಕಾಂತ ಕೊರ್ಲಹಳ್ಳಿ, ಬಿ.ಎಫ್. ಚೇಗರಡ್ಡಿ, ಶೇಕಣ್ಣ ಕಳಸಾಪೂರಶೆಟ್ಟರ, ಕೆ.ಪಿ. ಗುಳಗೌಡರ, ಅನಂತ ಮೋಹನಭಟ್, ಜಯದೇವಭಟ್, ಡಾ. ಅನಂತ ಶಿವಪೂರ, ಡಾ. ವಾಣಿ ಶಿವಪೂರ, ಮಹೇಶ ಶಟವಾಜಿ, ಷಡಕ್ಷರಿ ಮೆಣಸಿನಕಾಯಿ, ರಾಜಶೇಖರಗೌಡ ಪಾಟೀಲ, ಜೆ.ಎ. ಪಾಟೀಲ, ಡಾ. ರಾಜಶೇಖರ ದಾನರಡ್ಡಿ, ಅಶೋಕ ಸತರಡ್ಡಿ, ಡಾ. ಬಿ.ಬಿ. ಹೊಳಗುಂದಿ, ಬಿ.ಎಸ್. ಹಿಂಡಿ, ಸತೀಶಕುಮಾರ ಚನ್ನಪ್ಪಗೌಡರ, ಡಿ.ಎಸ್. ಬಾಪುರಿ, ಎಸ್. ಎಫ್. ಬೆನಕಣ್ಣವರ, ರತ್ನಕ್ಕ ಘಾರ್ಗಿ, ಎಸ್.ವಿ. ಬಳ್ಳಿ, ರತ್ನಾ ಪುರಂತರ, ಎಲ್.ಎಂ. ನಿಡವಣಿ, ಶೈಲಜಾ ಗಿಡ್ನಂದಿ, ಆರ್.ಡಿ. ಕಪ್ಪಲಿ, ಬಸವರಾಜ ಗಣಪ್ಪನವರ, ತಿಪ್ಪಾನಾಯ್ಕ ಎಲ್., ಭಾಗ್ಯಶ್ರೀ ಹುರಕಡ್ಲಿ, ಶೈಲಜಾ ಕಪ್ಪರದ, ರಶ್ಮಿ ಅಂಗಡಿ, ಎಸ್.ವಿ. ಗುತ್ತಿ, ಅಜಿತ ಘೋರ್ಪಡೆ, ಎಚ್.ಟಿ. ಸಂಜೀವಸ್ವಾಮಿ, ಕೆ.ಎಸ್. ಗುಗ್ಗರಿ, ಡಾ. ಅಶೋಕ ಮತ್ತಿಗಟ್ಟಿ, ಡಾ. ಎಂ.ಎ. ಮತ್ತಿಗಟ್ಟಿ, ಅಕ್ಕಮ್ಮ ಪಾರ್ವತಿಮಠ, ಉಮಾ ಪಾರ್ವತಿಮಠ, ಶಶಿಕಲಾ ಸಿಂಧೂರ, ರಾಜಶೇಖರ ಕರಡಿ, ಡಾ. ರಾಜೇಂದ್ರ ಗಡಾದ, ಉಮಾದೇವಿ ಕಣವಿ, ಬಸವರಾಜ ಮನಗೂಳಿ, ಬಿ.ಎಸ್. ಬಣಕಾರ, ಶ್ರೀಕಾಂತ ಬಗಾಡೆ, ಅಂಬರೀಷ ರಾಮಪೂರ, ಮೊದಲಾದವರು ಉಪಸ್ಥಿತರಿದ್ದರು.

**ಪತ್ರಿಕಾಗೋಷ್ಠಿಯಲ್ಲಿ ಜಾತ್ರಾ ಮಹೋತ್ಸವದ ಸಮಿತಿ ಅಧ್ಯಕ್ಷ ಗಂಗಪ್ಪ ಸುಂಕಾಪೂರ ಮಾಹಿತಿ**

# ಇಂದಿನಿಂದ ಸಿದ್ದೇಶ್ವರ ಜಾತ್ರಾ ಮಹೋತ್ಸವ



■ **ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಐತಿಹಾಸಿಕ ಸಿದ್ದೇಶ್ವರ ಜಾತ್ರಾ ಮಹೋತ್ಸವದಲ್ಲಿ ಏ.9 ಸಾಯಂಕಾಲ 5 ಗಂಟೆಗೆ ವೈಭವದೊಂದಿಗೆ ಸಿದ್ದೇಶ್ವರ ರಥೋತ್ಸವ ಜರುಗಲಿದೆ ಎಂದು ಜಾತ್ರಾ ಮಹೋತ್ಸವದ ಸಮಿತಿ ಅಧ್ಯಕ್ಷ ಗಂಗಪ್ಪ ಸುಂಕಾಪೂರ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಅವರು, ಸಾಯಂಕಾಲ 7 ಗಂಟೆಗೆ ನಡೆಯುವ ಅನುಭಾವ ಗೋಷ್ಠಿ-1ರ ಸಾನ್ನಿಧ್ಯವನ್ನು ಅಗಡಿ ಅಕ್ಕಿಮಠದ ಗುರುಲಿಂಗ ಮಾಹಾಸ್ವಾಮಿಗಳು, ಸಮ್ಮುಖವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ವಹಿಸುವರು. ಬೆಳಗಾವಿ ಬಸವಬೆಳವಿಯ ಶರಣಬಸವದೇವರು ಕೈವಲ್ಯ ದರ್ಪಣ ವಿಷಯದ ಕುರಿತು ಉಪನ್ಯಾಸ ನೀಡುವರು, ಅಧ್ಯಕ್ಷತೆಯನ್ನು ಗೌರಮ್ಮಾ ಬಡ್ನಿ ವಹಿಸಲಿದ್ದು, ಎಸ್.ಎಂ. ನೀಲಗುಂದ ಉದ್ಘಾಟಿಸುವರು. ಎಂ.ಡಿ. ಬಟ್ಟೂರರನ್ನು ಸನ್ಮಾನಿಸಲಾಗುವುದು. ಅತಿಥಿಗಳಾಗಿ ಡಾ. ಎಸ್.ಸಿ. ಚವಡಿ, ಬಿ.ಎಂ. ವಾಲಿ, ಆರ್.ಸಿ. ಕಮಾಜಿ, ಹೊನ್ನಪ್ಪ ಜೋಗಿ, ಮಾಹಾದೇವಪ್ಪ ಹುಬ್ಬಳ್ಳಿ, ನೀಲಪ್ಪ ವಿಜಾಪೂರ, ಕಾಶಿನಾಥ ಮರಿದೇವರಮಠ, ಮನ್ಸೂರ ಹಣಗಿ, ಎ.ಡಿ. ಮುಜಾವಾರ ಪಾಲ್ಗೊಳ್ಳುವರು. ಸಂಗೀತ ಸೇವೆಯನ್ನು ರೇವಣಶಿದ್ದಯ್ಯ ಮರಿದೇವರಮಠ, ರಸಮಂಜರಿ ಕಾರ್ಯಕ್ರಮವನ್ನು ಕೊಪ್ಪಳದ ಡಾ.ಜೀವನಸಾಬ ಬಿನ್ನಾಳ ಜಾನಪದ ಕಲಾ ತಂಡದವರು ನಡೆಸಿಕೊಡುವರು.

ಏ.10ರ ಸಾಯಂಕಾಲ 5 ಗಂಟೆಗೆ ಕಡುಬಿನ ಕಾಳಗ, 7 ಗಂಟೆಗೆ ಅನುಭಾವ ಗೋಷ್ಠಿ-2ರ ಸಾನ್ನಿಧ್ಯವನ್ನು ಮುಳಗುಂದ ಗವಿಮಠದ ಡಾ.ಮಲ್ಲಿಕಾರ್ಜುನ ಮಾಹಾಸ್ವಾಮಿಜಿ ವಹಿಸುವರು. ಸಮ್ಮುಖವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗದೇವರು, ಅಧ್ಯಕ್ಷತೆಯನ್ನು ಆರ್.ಸಿ. ಕಮಾಜಿ ವಹಿಸುವರು. 'ಸಮಗ್ರ ಕೃಷಿಯಲ್ಲಿ ಸ್ವಾವಲಂಬಿ ಬದುಕು ಕುರಿತು' ಬೆಳವಟಗಿ ಕೃಷಿ ಸಂಶೋಧನಾ ಕೇಂದ್ರದ ಡಾ. ಸಿ.ಎಂ. ರಫೀ ಉಪನ್ಯಾಸವನ್ನು ನೀಡುವರು. ಮುಖ್ಯ ಅತಿಥಿಗಳಾಗಿ ಫಕ್ಕೀರಯ್ಯ ಅಮೋಘಿಮಠ, ಅಶೋಕ ಸೋನಗೋಜಿ, ಮಾಹಾಂತಪ್ಪ ಪಲ್ಲೆದ, ಕುಬೇರಪ್ಪ ಗಡಾದ, ಸಂಜಯ ನೀಲಗುಂದ, ಸೋಮಣ್ಣ ಸುಂಕದ, ಯಲ್ಲಪ್ಪ ಅದರಗುಂಚಿ, ಹೊನ್ನಪ್ಪ ನೀಲಗುಂದ, ಅಶೋಕ ಮೆಣಸಿನಕಾಯಿ, ಅಶೋಕ ಹುಣಸಿಮರದ, ಹಜರತ್‌ಅಲಿ ಲಾಡಸಾಬನವರ, ಅನೂಪ ಕೆಂಚನಗೌಡರ ಪಾಲಗೊಳ್ಳುವರು. ನಿವೃತ್ತ ಶಿಕ್ಷಕ ರಾಮಣ್ಣ ಹಾಳಕೇರಿಯವರನ್ನು ಸನ್ಮಾನಿಸಲಾಗುವುದು.

ವಿಜಯಲಕ್ಷ್ಮಿ ಹಿರೇಮಠರಿಂದ ಸಂಗೀತ ಸೇವೆ, ಉಡುಪಿಯ ಕಲಾ ಸಿಂಧು ಸಂಗೀತ ಬಳಗದ ಕಲಾವತಿ ದಯಾನಂದ ಇವರಿಂದ ರಸಮಂಜರಿ ಕಾರ್ಯಕ್ರಮ ಜರಗುವುದು ಎಂದು ಮಾಹಿತಿ ನೀಡಿದರು.

# ಕ್ಷೇತ್ರದ ಸಮಗ್ರ ಅಭಿವೃದ್ಧಿ ನನ್ನ ಕನಸು

▶▶ ಮೊದಲನೇ ಪುಟದಿಂದ

ಪ್ರಕಾಶ ಮಹಾಜನಶೆಟ್ಟರ, ಶಂಕರಣ್ಣ ಕಾಳೆ, ನೀಲೇಶ ಕಾಳೆ, ಅಶೋಕ ಶಿರಹಟ್ಟಿ, ನಿಂಗಪ್ಪ ಹುನಗುಂದ, ಹೆಚ್.ಎಫ್. ತಳವಾರ, ಸಿದ್ದಣ್ಣ ಯಲಿಗಾರ, ಎಸ್.ಕೆ. ಕಾಳಪ್ಪನವರ, ವೀರಣ್ಣ ಪವಾಡದ, ಈರಣ್ಣ ಅಕ್ಕೂರ, ಶಂಭು ಹುನಗುಂದ, ಪ್ರಕಾಶ ಜಾವೂರ, ಮಾಂತೇಶ ಜಾವೂರ, ಮಂಜುನಾಥ ಪೂಜಾರ, ಬಸವರಾಜ ಬಳಿಗಾರ, ಮರಿಯಪ್ಪ ವಾಲ್ಮೀಕಿ, ಮಂಜಯ್ಯ ಪೂಜಾರ, ಪುತ್ರಪ್ಪ ಹುಬ್ಬಳ್ಳಿ, ಬೂದಪ್ಪ ವಾಲ್ಮೀಕಿ, ಭೀಮಪ್ಪ ಯಂಗಾಡಿ, ಮೈಲಾರಪ್ಪ ಕಾಳೆ, ಚಿದಾನಂದ ಮಲ್ಲೂರ, ಜಗದೀಶ ಕುಮಸಿ, ಚನ್ನಬಸಪ್ಪ ಲಿಂಗಶೆಟ್ಟಿ, ನೀಲೇಶ ಕಾಳೆ, ಬೀರಪ್ಪ ಕೆರೂರ, ಬಸವರಾಜ ಇಟಗಿ, ಶಿವಲಿಂಗಯ್ಯ ಕಳಸದಮಠ, ಮಂಜುನಾಥ ಮೂಲಿಮನಿ, ವೀರೇಶ ಕಳ್ಳಿಹಾಳ, ಕುಮಾರ ಬೆಟಗೇರಿ, ವೀರಣ್ಣ ಮೇಗಿಲಮನಿ, ಚಂದ್ರಣ್ಣ ಸೂರಣಗಿ, ಮಾರುತಿ ಸತ್ಯಮ್ಮನವರ, ಜಿ.ಆರ್. ಕುಬೇರ, ನಾಗಯ್ಯ, ನಿಂಗಪ್ಪ ಪ್ಯಾಟಿ, ವಿರುಪಾಕ್ಷಪ್ಪ ಮರಳಿಹಳ್ಳಿ, ವಿನಾಯಕ ಶಿರೋಳ, ಮಂಜು ಅತ್ತಿಗೇರಿ, ರಮೇಶ ಜೋಗೇರ ಸೇರಿದಂತೆ ಅಪಾರ ಸಂಖ್ಯೆಯ ಕಾರ್ಯಕರ್ತರಿದ್ದರು.

# ರಥೋತ್ಸವದ ತೇರಿನ ಗಾಲಿ ಪೂಜೆ ಇಂದು



■ **ವಿಜಯಸಾಕ್ಷಿ ಸುದ್ದಿ, ಗದಗ**

ಉಸುಗಿನಕಟ್ಟಿ ಓಣಿ ಶ್ರೀ ಗಂಜಿ ಬಸವೇಶ್ವರ ದೇವಸ್ಥಾನದ 62ನೇ ವರ್ಷದ ರಥೋತ್ಸವದ ತೇರಿನ ಗಾಲಿ ಪೂಜೆ ಕಾರ್ಯಕ್ರಮವು ಏ.9, ಯುಗಾದಿ ಪಾಡ್ಯದಂದು ಬೆಳಿಗ್ಗೆ 8.30 ಗಂಟೆಗೆ ಜರುಗಲಿದೆ. ಸಕಲ ಸದ್ಭಕ್ತರು, ರೈತ ಬಳಗ, ಹಾಗೂ ಯುವ ಮಿತ್ರರು ಆಗಮಿಸಲು 62ನೇ ವರ್ಷದ ಜಾತ್ರಾ ಕಮಿಟಿ ಅಧ್ಯಕ್ಷರು ಹಾಗೂ ಸರ್ವ ಪದಾಧಿಕಾರಿಗಳು, ಪಂಚಕಮಿಟಿ ಪದಾಧಿಕಾರಿಗಳು ವಿನಂತಿಸಿದ್ದಾರೆ.

# ದೇಶದ ಅಭಿವೃದ್ಧಿಗಾಗಿ ಬಿಜೆಪಿಯನ್ನು ಬೆಂಬಲಿಸಿ



■ **ವಿಜಯಸಾಕ್ಷಿ ಸುದ್ದಿ, ರೋಣ**

ದೇಶದ ಸಮಗ್ರ ಅಭಿವೃದ್ಧಿಗಾಗಿ ಮತದಾರರು ಬಿಜೆಪಿ ಪಕ್ಷವನ್ನು ಹೆಚ್ಚಿನ ಸಂಖ್ಯೆಯಲ್ಲಿ ಬೆಂಬಲಿಸಬೇಕು ಎಂದು ಮಾಜಿ ಸಚಿವ ಕಳಕಪ್ಪ ಬಂಡಿ ಹೇಳಿದರು.


ಅವರು ಹಾವೇರಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಹಾಗೂ ಮಾಜಿ ಸಿಎಂ ಬಸವರಾಜ ಬೊಮ್ಮಾಯಿಯವರ ಪರವಾಗಿ ಬಾಸಾಲಾಪೂರ, ಹಿರೇಮಣ್ಣೂರ, ಅರಹುಣಸಿ, ಚಿಕ್ಕಮಣ್ಣೂರ ಗ್ರಾಮಗಳಲ್ಲಿ ಮತಯಾಚಿಸಿ ಮಾತನಾಡಿದರು.

ಕೇಂದ್ರದಲ್ಲಿ ಪ್ರದಾನಿ ನರೇಂದ್ರ ಮೋದಿಯವರ ಆಡಳಿತ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು, ದೇಶದ ಜನತೆಗೆ ಸಾಕಷ್ಟು ಅನುಕೂಲ ಕಲ್ಪಿಸಿಕೊಟ್ಟಿದ್ದಾರೆ. ದೇಶದ ರಕ್ಷಣೆಯಲ್ಲಿ ಮುಂಚೂಣಿಯಲ್ಲಿ ನಿಂತಿರುವ ಪ್ರದಾನಿ ನರೇಂದ್ರ ಮೋದಿಯವರ ಕೈ ಬಲಪಡಿಸಲು ಮತದಾರರು ಬಿಜೆಪಿ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿಯವರು ಸ್ಪರ್ಧಿಸಿದ್ದು, ಕ್ಷೇತ್ರದ ಅಭಿವೃದ್ಧಿಗೆ ಪೂರಕವಾಗಿದೆ. ಕೇಂದ್ರದಲ್ಲಿ ಬಿಜೆಪಿ ಮತ್ತೊಮ್ಮೆ ಅಧಿಕಾರಕ್ಕೆ ಬರಲಿದ್ದು, ಹಾವೇರಿ ಕ್ಷೇತ್ರದಿಂದ ಮಾಜಿ ಸಿಎಂ ಗೆಲುವು ಸಾಧಿಸಿದರೆ ರೋಣ ಕ್ಷೇತ್ರದ ಏಳ್ಗೆಗೆ ಸಹಕಾರಿಯಾಗಲಿದೆ ಎಂದರು.

ರೋಣ ಮಂಡಲ ಅಧ್ಯಕ್ಷ ಮುತ್ತಣ್ಣ ಕಡಗದ, ಬಿ.ಎಂ. ಸಜ್ಜನ, ಶಿವಾನಂದ ಮಠದ, ಶಿದ್ದಣ್ಣ ಬಳಿಗಾರ್, ಅಶೋಕ ನವಲಗುಂದ, ಅನಿಲ್ ಪಲ್ಲೇದ, ಶಿವಾನಂದ ಜಿಡ್ಡಿಬಾಗಿಲ್, ಬಸವರಾಜ ಕೊಟಗಿ, ಶಿವಪ್ಪ ಹವಳಪ್ಪನವರ, ನ್ಯಾಯವಾದಿ ರಂಗನಗೌಡ್ರ, ಮಂಜು ಕೊಪ್ಪದ ಸೇರಿದಂತೆ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಬಿಜೆಪಿ ಸಂಸ್ಥಾಪನಾ ದಿನಾಚರಣೆ



■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಭಾರತೀಯ ಜನತಾ ಪಾರ್ಟಿಯ ಸಂಸ್ಥಾಪನಾ ದಿನಾಚರಣೆಯ ಅಂಗವಾಗಿ ಸಮೀಪದ ಜಕ್ಕಲಿ ಗ್ರಾಮದಲ್ಲಿರುವ ರೋಣ ಮಂಡಲ ಅಧ್ಯಕ್ಷ ಮುತ್ತಣ್ಣ ಕಡಗದ ಅವರ ಮನೆಯ ಮೇಲೆ ಪಕ್ಷದ ಧ್ವಜ ಅನಾವರಣ ಮಾಡುವುದರ ಮೂಲಕ ಸಂಸ್ಥಾಪನಾ ದಿನಾಚರಣೆಯನ್ನು ಆಚರಿಸಲಾಯಿತು.

ಈ ವೇಳೆ ಮುತ್ತಣ್ಣ ಕಡಗದ ಮಾತನಾಡಿ, ಭಾರತೀಯ ಜನತಾ ಪಕ್ಷ ನಡೆದು ಬಂದ ಹಾದಿಯ ಕುರಿತು ತಿಳಿಸುತ್ತ, 1951ರಲ್ಲಿ ಭಾರತೀಯ ಜನತಾ ಸಂಘ ಪ್ರಾರಂಭವಾಯಿತು. 1977ರಲ್ಲಿ ಭಾರತೀಯ ಜನತಾ ಪಕ್ಷವಾಗಿ ಮಾರ್ಪಾಡಾಯಿತು. 1980 ಏ. 6ರಂದು ಭಾರತೀಯ ಜನತಾ ಪಕ್ಷವಾಗಿ ಉದಯವಾಯಿತು ಎಂದು ಹೇಳಿ ಪಕ್ಷದ ಸಾಧನೆ ಕುರಿತು ತಿಳಿಸಿದರು.

ಈ ಸಂದರ್ಭದಲ್ಲಿ ಶೇಖಪ್ಪ ಮಾರನಬಸರಿ, ಚನ್ನಬಸಪ್ಪ ಕೊಪ್ಪದ, ಬಸವರಾಜ ಶ್ಯಾಶೆಟ್ಟಿ, ಗುರುಪಾದ ವಾಲಿ, ಶರಣಪ್ಪ ಕೋರಿ, ಶಿವು ಬಳಗೇರ, ಸುಭಾಸ ಬೆಲ್ಲದ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಜಕ್ಕಲಿಯಲ್ಲಿ ಎರಡು ದಿನಗಳ ಜಂಗಿ ನಿಕಾಲಿ ಬಯಲು ಕುಸ್ತಿ ಪಂದ್ಯಾವಳಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕುಸ್ತಿಯ ತವರೂರು ಎಂಬ ಖ್ಯಾತಿ ಪಡೆದಿರುವ ಸಮೀಪದ ಜಕ್ಕಲಿ ಗ್ರಾಮದಲ್ಲಿ ಏ.9 ಮತ್ತು 10ರಂದು ಪ್ರಖ್ಯಾತ್ ಪೈಲ್ವಾನರ ಬಯಲು ಕುಸ್ತಿ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸ್ಥಳೀಯ ಶ್ರೀ ಮಾರುತೇಶ್ವರ ವ್ಯಾಯಾಮ ಶಾಲೆಯ ಆಶ್ರಯದಲ್ಲಿ ಯುಗಾದಿ ಹಬ್ಬದ ಪ್ರಯುಕ್ತ ಶ್ರೀ ಮಾರುತೇಶ್ವರನ ಹೊಂಡ ತುಳುಕಿಸುವ ಕಾರ್ಯಕ್ರಮದ ಅಂಗವಾಗಿ ಹಾಗೂ ಗ್ರಾಮದ ಶ್ರೀ ಮಾರುತಿ ಗರಡಿ ವ್ಯಾಯಾಮ ಶಾಲೆಯ ಹಿರಿಯ ಗುರುವಾಗಿದ್ದ ಪ್ರಖ್ಯಾತ ಪೈಲ್ವಾನ್ ದಿ. ಮೂಖಪ್ಪಜ್ಜ ಸಂಕನೂರ ಇವರ 16ನೇ ವರ್ಷದ ಪುಣ್ಯಾರಾಧನೆಯ ನಿಮಿತ್ತ ಬಸ್ ನಿಲ್ದಾಣ ಹತ್ತಿರದ ತೋಟಪ್ಪನವರು ಕಡಗದ ಇವರ ಜಮೀನಿನಲ್ಲಿ ಸಂಜೆ 4 ಗಂಟೆಗೆ ಎರಡು ದಿನಗಳ ಕಾಲ ನಡೆಯಲಿವೆ.

ಸ್ಪರ್ಧೆಯಲ್ಲಿ ಭಾಗವಹಿಸಲು ಕ್ರೀಡಾಪಟುಗಳಿಗೆ ಉಚಿತ ಪ್ರವೇಶವಿದ್ದು, ರಾಜ್ಯದ ವಿವಿಧ ಊರುಗಳಿಂದ 200ಕ್ಕೂ ಹೆಚ್ಚು ಕುಸ್ತಿ ಪಟುಗಳು ಭಾಗವಹಿಸುವ ನಿರೀಕ್ಷೆ ಇದೆ ಎಂದು ಸಂಘಟಕರು ತಿಳಿಸಿದ್ದಾರೆ.

ಈ ಪಂದ್ಯಾವಳಿಗೆ ಹಿರಿಯ ಕುಸ್ತಿಪಟುಗಳಾದ ಗಾಂಧೆಪ್ಪ ಕುರಿ, ಧರ್ಮಣ್ಣ ಕೆ.ಆರೇರ, ಯಲ್ಲಪ್ಪ ಮಡಿವಾಳರ ನಿರ್ಣಯಕರಾಗಿ ಪಾಲ್ಗೊಳ್ಳಲಿದ್ದು, ಪ್ರಥಮ 7001 ರೂ., ದ್ವಿತೀಯ 5001 ರೂ, ತೃತೀಯ 3001 ರೂ. ನಗದು ಬಹುಮಾನ ನೀಡಲಾಗುತ್ತಿದೆ. ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ಕುಸ್ತಿ ಪಟುಗಳಿಗೆ ವಿಶೇಷ ಆಕರ್ಷಕ ಬಹುಮಾನಗಳನ್ನು ನೀಡಲಾಗುತ್ತಿದ್ದು, ಪರ ಸ್ಥಳದ ಕ್ರೀಡಾಪಟುಗಳಿಗೆ ಊಟದ ವ್ಯವಸ್ಥೆ ಮಾಡಲಾಗಿದೆ.

ಸ್ಪರ್ಧಾಕಣದಲ್ಲಿ ನಿರ್ಣಾಯಕರ ನಿರ್ಣಯವೇ ಅಂತಿಮವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಶೇಖರ ಅಂ.ಯಾವಗಲ್ಲ-8095126277, ಸಂಗಮೇಶ ಜೆ. ಮೆಣಸಗಿ-9480123603 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

## ಬಸವ ಯೋಗ ಮಂದಿರದಲ್ಲಿ 'ವಿಶ್ವ ಆರೋಗ್ಯ ದಿನ' ಆಚರಣೆ

# ಸರ್ವರಿಗೂ ಆರೋಗ್ಯವೇ ಭದ್ರ ಬುನಾದಿ

■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ದೈನಂದಿನ ಬದುಕು ಪ್ರಾರಂಭವಾಗುವದೇ ಆರೋಗ್ಯದಿಂದ. ಆರೋಗ್ಯ ಇಲ್ಲದಿದ್ದರೆ ಬದುಕು ಶೂನ್ಯವೆನಿಸುವುದು. ಅಂತೆಯೇ 'ಆರೋಗ್ಯವೇ ಭಾಗ್ಯ'ವೆಂದು ಎಲ್ಲರೂ ಹೇಳುತ್ತಾರೆ. ಒಬ್ಬ ವ್ಯಕ್ತಿಯ ಇಂದ್ರಿಯಗಳು ಯಾವುದೇ ದೋಷವಿಲ್ಲದೇ ಕಾರ್ಯನಿರ್ವಹಿಸುತ್ತಿದ್ದರೆ ಆ ವ್ಯಕ್ತಿ ಆರೋಗ್ಯವಂತನೆಂದು ತಿಳಿಯುತ್ತೇವೆ. ಒಬ್ಬ ವಿದ್ಯಾರ್ಥಿ ಪರೀಕ್ಷೆಯಲ್ಲಿ ರ್‍ಯಾಂಕ್ ಪಡೆದು ಅನಾರೋಗ್ಯ ಪೀಡಿತನಾದರೆ ಪ್ರಯೋಜನವೇನು? ಒಂದು ಕಟ್ಟಡ ಗಟ್ಟಿಯಾಗಿ ನಿಲ್ಲಲು ಅದರ ತಳಪಾಯ ಭದ್ರವಾಗಿರಬೇಕು. ಹೀಗೆಯೇ ಜೀವಿಯು ಹೆಚ್ಚು ಕಾಲ ಬಾಳಿ ಬದುಕಲು, ಕ್ರಿಯಾಶೀಲನಾಗಿರಲು ಆರೋಗ್ಯ ಬೇಕೇಬೇಕು. ಈ ಹಿನ್ನೆಲೆಯಲ್ಲಿ ಸರ್ವ ಕಾರ್ಯಗಳ ಸಾಧನೆ ಸಿದ್ಧಿಗಾಗಿ ಆರೋಗ್ಯವೇ ಭದ್ರ ಬುನಾದಿಯಾಗಿದೆ ಎಂದು ನಿವೃತ್ತ ಇಂಜಿನಿಯರ್ ವಾಸುದೇವರಡ್ಡಿ ಮೇಕಳಿ ಅಭಿಪ್ರಾಯಪಟ್ಟರು.



ವೇದಿಕೆಯಲ್ಲಿ ಉಪಸ್ಥಿತರಿದ್ದ ಡಿ.ಜಿ.ಎಂ. ಆಯುರ್ವೇದ ಮೆಡಿಕಲ್ ಕಾಲೇಜಿನ ಪ್ರಾಧ್ಯಾಪಕ ಡಾ. ಎಂ.ವಿ. ಐಹೊಳ್ಳಿ ಮಾತನಾಡಿ, ಕೇವಲ ವಿಶ್ವ ಆರೋಗ್ಯ ದಿನಾಚರಣೆಯಿಂದ ನಾವೆಲ್ಲ ಆರೋಗ್ಯವಂತರಾಗಿರುವುದು ಅಸಾಧ್ಯ. ಅದಕ್ಕಾಗಿ ನಾವು ವಿದ್ಯಾರ್ಥಿಗಳಲ್ಲಿ, ನೆರೆಹೊರೆಯವರಲ್ಲಿ, ಸಮಾಜದಲ್ಲಿ ಆರೋಗ್ಯದ ಅರಿವು ಮೂಡಿಸಬೇಕು. ಈ ಕಾರ್ಯ ನನ್ನದಲ್ಲ ಎಂದು ಭಾವಿಸದೇ ಆರೋಗ್ಯ ಜಾಗೃತಿ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಸಭಿಕರಿಗೆ ತಿಳಿದಿದರಲ್ಲದೆ, ಈ ಕಾರ್ಯದಲ್ಲಿ ನನ್ನನ್ನು ನಾನು ತೊಡಗಿಸಿಕೊಂಡಿರುವೆ ಎಂದು ಹೆಮ್ಮೆಯಿಂದ ತಿಳಿಸಿದರು.

ಇಲ್ಲಿನ ಎಸ್ ವಾಯ್ ಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ಇವರುಗಳ ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆದ 528ನೇ 'ಅನ್ವೇಷಣೆ' ಕಾರ್ಯಕ್ರಮ, ವಿಶ್ವ ಆರೋಗ್ಯ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ಮಾತನಾಡಿ, ಪ್ರಸ್ತುತ ದಿನಮಾನದಲ್ಲಿ ಮಕ್ಕಳಿಂದ ಮೊದಲ್ಗೊಂಡು ಬಹುತೇಕ ಜನತೆ ದುಶ್ಚಟಗಳಿಗೆ ಮಾರುಹೋಗಿ, ಆರೋಗ್ಯದ ಬಗ್ಗೆ ಕಾಳಜಿ ವಹಿಸುತ್ತಿಲ್ಲ. ಹೀಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಜನತೆ ಅನಾರೋಗ್ಯ ಪೀಡಿತರಾಗುತ್ತಿದ್ದಾರೆ. ನಾವೆಲ್ಲರೂ ಆರೋಗ್ಯವಂತರಾಗಿರಬೇಕಾದರೆ ದುಶ್ಚಟಗಳಿಂದ ದೂರವಿರಬೇಕೆಂದು ತಿಳಿಸಿದರು.

ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಉಪಾಧ್ಯಕ್ಷೆ ವಿಜಯಾ ಚನ್ನಶೆಟ್ಟಿ ಮಾತನಾಡಿ, ಮೊದಲು ಅಡುಗೆ ಮನೆ ಆರೋಗ್ಯಯುತವಾಗಿರಬೇಕು. ಅಂದರೆ ಮಹಿಳೆ ಆರೋಗ್ಯಯುತ ಆಹಾರ ತಯಾರಿಸಿದರೆ ಅಂಥ ಆಹಾರ ಸೇವಿಸಿದವರೆಲ್ಲರೂ ಆರೋಗ್ಯವಂತರಾಗಿರುತ್ತಾರೆ. ಹೀಗಾಗಿ ಮಹಿಳೆಯರು ಆರೋಗ್ಯದ ಮಹತ್ವವನ್ನು ತಿಳಿಯಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಯೋಗ ಪಾಠಶಾಲೆಯ ನಿತ್ಯಯೋಗ ಸಾಧಕರು, ಸದಸ್ಯರು ಹೆಚ್ಚಿನ ಉಪಸ್ಥಿತರಿದ್ದರು. ವೀಣಾ ಮಾಲಿಪಾಟೀಲ ಪ್ರಾರ್ಥಿಸಿದರು. ವೀಣಾ ಗೌಡರ ಸ್ವಾಗತ ಕೋರಿದರು. ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಪ್ರಾಸ್ತಾವಿಕ ನುಡಿ ತಿಳಿಸಿ ಕಾರ್ಯಕ್ರಮ ನಿರೂಪಿಸಿದರು. ವಿಜಯಲಕ್ಷ್ಮೀ ಮೇಕಳಿ ವಂದಿಸಿದರು.

# ಪರಿಸರ ಜಾಗೃತಿಯಲ್ಲಿ ತೊಡಗಿ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಪಕ್ಷಿಗಳಿಗೆ ಕುಡಿಯುವ ನೀರು ಹಾಗೂ ದವಸ-ಧಾನ್ಯಗಳನ್ನು ಇಡುವ ಕಾರ್ಯವನ್ನು ಇಲ್ಲಿನ ಕರ್ನಾಟಕ ವಿಶ್ವವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕವಿವಿ ಗಾರ್ಡನ್ ವಿಭಾಗದ ಸಹಯೋಗದಲ್ಲಿ ವಿವಿಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ನೆರವಿನೊಂದಿಗೆ ಕುಲಪತಿ ಪ್ರೊ. ಕೆ.ಬಿ. ಗುಡಸಿ ನೀರು ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಕವಿವಿ ಕ್ಯಾಂಪಸ್‌ನಲ್ಲಿ 128 ವಿವಿಧ ಪಕ್ಷಿಗಳು ಇರುವುದನ್ನು ಗುರುತಿಸಿದ್ದು, ಬೇಸಿಗೆಯ ಬಿಸಿಲಿನಲ್ಲಿ ಅವುಗಳಿಗೆ ಕುಡಿಯುವ ನೀರು ಪೂರೈಸಲು ಈ ರೀತಿಯ ತೊಟ್ಟಿಗಳನ್ನು ಇಡುವ ಮೂಲಕ ಪ್ರತಿಯೊಬ್ಬರೂ ಪಕ್ಷಿ ಸಂಕುಲಕ್ಕೆ ನೆರವಾಗಬೇಕು ಎಂದು ಹೇಳಿದರು.

ಕುಲಸಚಿವ ಡಾ. ಎ.ಚೆನ್ನಪ್ಪ ಮಾತನಾಡಿ, ಹಳ್ಳಿಗಳಲ್ಲಿ ಕೆರೆ ನಿರ್ಮಾಣ ಮಾಡುವುದರ ಮೂಲಕ ಮನುಷ್ಯರ ಜೊತೆಗೆ ಪ್ರಾಣಿ ಪಕ್ಷಿಗಳು, ಜೀವ ಸಂಕುಲನಕ್ಕೆ ಬೇಸಿಗೆಯಲ್ಲಿ ನೀರು ಸಿಗುವಂತೆ ನಮ್ಮ ಪೂರ್ವಜರು ಮಾಡಿದ್ದಾರೆ. ಅದನ್ನು ಉಳಿಸಿಕೊಂಡು ನಾವು ಪರಿಸರ ಜಾಗೃತಿ ಕಾರ್ಯದಲ್ಲಿ ತೊಡಗಬೇಕು ಎಂದು ಹೇಳಿದರು.

ಮೌಲ್ಯಮಾಪನ ಕುಲಸಚಿವ ಪ್ರೊ.ನಿಜಲಿಂಗಪ್ಪ ಮಟ್ಟಿಹಾಳ ಮಾತನಾಡಿ, ಸಕಲಜೀವಾತ್ಮರಿಗೆ ಲೇಸನ್ನು ಬಯಸುವುದು ನಿಜವಾದ ಧರ್ಮವಾಗಿದೆ. ಈ ವರ್ಷ ಬೇಸಿಗೆ ಬಿಸಿಲು ಹೆಚ್ಚಾಗಿದ್ದು, ಪ್ರತಿಯೊಬ್ಬರೂ ತಮ್ಮ ಮನೆ ಮುಂದೆ ನೀರು ಇಡುವ ಮೂಲಕ ಪಕ್ಷಿಗಳ ನೀರಿನ ದಾಹ ನೀಗಿಸಬೇಕು ಎಂದರು.

ಗಾರ್ಡನ್ ವಿಭಾಗದ ಮುಖ್ಯಸ್ಥ ಡಾ. ಮುಳಗುಂದ, ಎನ್‌ಎಸ್‌ಎಸ್ ಅಧಿಕಾರಿ ಡಾ. ಎಂ.ಬಿ ದಳಪತಿ, ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ರಂಜಾನ್ ಹಬ್ಬದ ನಿಮಿತ್ತ ಸಾರ್ವಜನಿಕರ ಶಾಂತಿ ಸಭೆಯಲ್ಲಿ ಪಿಎಸ್‌ಐ ಈರಣ್ಣ ರಿತ್ತಿ

# ಹಬ್ಬಗಳನ್ನು ಶಾಂತಿಯುತವಾಗಿ ಆಚರಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಂಜಾನ್ ಮತ್ತು ಯುಗಾದಿ ಹಬ್ಬಗಳು ಏಕ ಕಾಲಕ್ಕೆ ಬಂದಿದ್ದು, ಭಾವೈಕ್ಯತೆಗೆ ಹೆಸರಾದ ಪಟ್ಟಣದಲ್ಲಿ ಎಲ್ಲರೂ ಸೌಹಾರ್ದತೆ, ಸಹೋದರತೆಯ ಭಾವನೆಯಿಂದ ಹಬ್ಬವನ್ನು ಶಾಂತಿಯುತವಾಗಿ ಆಚರಣೆ ಮಾಡಬೇಕು ಎಂದು ಪಿಎಸ್‌ಐ ಈರಣ್ಣ ರಿತ್ತಿ ಹೇಳಿದರು.

ಅವರು ಪಟ್ಟಣದ ಪೊಲೀಸ್ ಠಾಣೆಯಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಕರೆದ ಸಾರ್ವಜನಿಕರ ಶಾಂತಿ ಸಭೆಯಲ್ಲಿ ಮಾತನಾಡಿ, ಲೋಕಸಭೆ ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಯಲ್ಲಿ ಹಬ್ಬಗಳನ್ನು ಸರಳ ಮತ್ತು ಶಾಂತಿಯುತವಾಗಿ ಆಚರಿಸಬೇಕು. ಮೈಕ್, ಡಿಜೆ ಸೇರಿದಂತೆ ಇತರೆ ಕಾರ್ಯಕ್ರಮಗಳಿಗೆ ಕಡ್ಡಾಯವಾಗಿ ಅನುಮತಿ ಪಡೆಯಬೇಕೆಂದು ತಿಳಿಸಿದರು.

ಜಾಮಿಯಾ ಮಸ್ಜೀದ್ ಕಮಿಟಿ ಅಧ್ಯಕ್ಷ ಅಬ್ದುಲ್‌ಕರೀಂ ಕರೀಂಖಾನವರ, ದೂದಪೀರಾಂ ದರ್ಗಾ ಕಮೀಟಿಯ ಅಧ್ಯಕ್ಷ ಸುಲೇಮಾನಸಾಬ ಕಣಕೆ ಮಾತನಾಡಿ,




ದೇಹ ಮತ್ತು ಆತ್ಮ ಶುದ್ಧಿಗಾಗಿ ತಿಂಗಳ ಪರ್ಯಂತ ಉಪವಾಸ ವ್ರತಾಚರಣೆಗಳನ್ನು ಪಾಲಿಸುವ ಪವಿತ್ರ ರಂಜಾನ್ ಹಬ್ಬವನ್ನು ಪರಸ್ಪರ ಸೌಹಾರ್ದತೆಯಿಂದ ಆಚರಿಸೋಣ. ವಿವಿಧತೆಯಲ್ಲಿ ಏಕತೆ ಹೊಂದಿದ ದೇಶದಲ್ಲಿ ವಿಶ್ವಕ್ಕೆ ಶಾಂತಿ ಸಂದೇಶ ಸಾರಿದ ಮುಹಮ್ಮದ್ ಪೈಗಂಬರರ ಆದರ್ಶ ವಿಚಾರಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ನೋಡಿಕೊಳ್ಳುವದು ಪೊಲೀಸರಷ್ಟೇ ಅಲ್ಲದೆ, ಎಲ್ಲರ ಜವಾಬ್ದಾರಿಯಾಗಿದ್ದು, ಸಹಕಾರದಿಂದ ನಡೆದುಕೊಳ್ಳೋಣ ಎಂದರು.

ಹಿರಿಯರಾದ ಪೂರ್ಣಜಿ ಕರಾಟೆ, ಅಂಜುಮನ್ ಕಮಿಟಿ ಕಾರ್ಯದರ್ಶಿ ಯೂನುಸಅಹ್ಮದ ಚೌರಿ, ಮಂಜುನಾಥ ಹೊಗೆಸೊಪ್ಪಿನ, ನಜೀರ ಅಹ್ಮದ ಗದಗ, ಇಕ್ಬಾಲಅಹ್ಮದ ಸೂರಣಗಿ, ಶರಣು ಗೋಡಿ, ಗಂಗಾಧರ ಮೆಣಸಿನಕಾಯಿ, ಸೋಮೇಶ ಉಪನಾಳ, ಜಾಕೀರ ಹುಸೇನ ಹವಾಲ್ದಾರ, ನೀಲಪ್ಪ ಪಡಗೇರಿ, ಮಲ್ಲನಗೌಡ ಪಾಟೀಲ, ಭೀಮಣ್ಣ ಯಂಗಾಡಿ, ಮಹೇಶ ಕಲಘಟಗಿ, ರಸೂಲ್‌ಸಾಬ್ ಮಕಾನದಾರ, ಸುರೇಶ ಹಟ್ಟಿ, ಹಿಂದೂ ಮುಸ್ಲಿಂ ಸಮಾಜದ ಮುಖಂಡರು, ಯುವಕರು ಭಾಗವಹಿಸಿದ್ದರು. ಪೊಲೀಸ್ ಸಿಬ್ಬಂದಿ ಎನ್.ಎಚ್. ಮಠಪತಿ, ಮಾರುತಿ ಲಮಾಣಿ ಕಾರ್ಯಕ್ರಮ ನಿರೂಪಿಸಿದರು.

ಯಶ್ ಅವರ ಕಟೌಟ್ ಕಟ್ಟುವ ವೇಳೆ ನಡೆದ ಘಟನೆಯಿಂದ ಆತ್ಮೀಯ ಗೆಳೆಯರ ಸಾವು ನಮ್ಮಲ್ಲಿ ನೋವನ್ನುಂಟು ಮಾಡಿದೆ. ಯಶ್ ಬಗ್ಗೆ ಅವರಿಗೆ ಅಪಾರವಾದ ಪ್ರೀತಿಯಿತ್ತು. ನಟ ಯಶ್ ಅವರು ಮೃತ ಗೆಳೆಯರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಬೇಕು. ನವೀನ ಮತ್ತು ಮುರಳಿ ಪ್ರಾಣ ಸ್ನೇಹಿತರಾಗಿದ್ದರು. ಜೀವನುದ್ದಕ್ಕೂ ಒಂದಾಗಿದ್ದ ಅವರು ಸಾವಿನಲ್ಲೂ ಒಂದಾದರು. ಗೆಳೆಯರ ಕುಟುಂಬಕ್ಕೆ ಭಗವಂತ ನೋವು ಸಹಿಸುವ ಶಕ್ತಿ ಕೊಡಲಿ.

– ಪ್ರಕಾಶ ಮ್ಯಾಗೇರಿ.
ಗಾಯಾಳು ಯುವಕ.

# ಶ್ರೀ ಕರಿಯಮ್ಮದೇವಿ ಜಾತ್ರಾ ಮಹೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಕರಿಯಮ್ಮದೇವಿ ಜಾತ್ರಾ ಮಹೋತ್ಸವದ ಅಂಗವಾಗಿ ಸೋಮವಾರ ಬೆಳ್ಳಿ ಉತ್ಸವ ಮೂರ್ತಿ ಪೂಜಾ ಕಾರ್ಯಕ್ರಮ ಅತ್ಯಂತ ವಿಜೃಂಭಣೆಯಿಂದ ಜರುಗಿತು.

ಪೂಜಾ ಕಾರ್ಯಕ್ರಮದಲ್ಲಿ ಶ್ರೀ ಕರಿಯಮ್ಮದೇವಿ ಬಡಾವಣೆ ಸುಧಾರಣಾ ಸಮಿತಿಯ ಅಧ್ಯಕ್ಷ ಸಿ.ಕೆ. ಮಾಳಶೆಟ್ಟಿ, ಜಾತ್ರಾ ಕಮಿಟಿಯ ಅಧ್ಯಕ್ಷ ಜಗದೀಶ ಪೂಜಾರ, ಸಮಿತಿಯ ಸದಸ್ಯರಾದ ಎಸ್.ಬಿ. ಹಡಗಲಿ, ಎಸ್.ಬಿ. ಕಣವಿ, ಎಂ.ಡಿ. ದೇಸಾಯಿಗೌಡ್ರ, ಪಿ.ಎಸ್. ಕುರಹಟ್ಟಿ, ಬಸವರಾಜ ನರೇಗಲ್ಲ, ಜೆ.ಕೆ. ತಮ್ಮಣ್ಣವರ, ವಾಯ್.ಕೆ. ಪಿಡಗಣ್ಣವರ, ಪಿ.ಬಿ. ಹಿರೇಮಠ, ಹೆಚ್.ಬಿ. ಶಿರಗುಂಪಿ, ಎಸ್.ಎಸ್. ಹೊಳೆಯಣ್ಣವರ, ಆರ್.ಬಿ. ಕುಲಕರ್ಣಿ, ಗುರಣ್ಣ ಕಲಕೇರಿ, ಮಹಾಂತೇಶ ಬೆಳಗಲಿ, ಮುತ್ತು ಮಾಲಗಿತ್ತಿ, ಕಿರಣ ಆರಟ್ಟಿ, ಬಸವರಾಜ ಅಣ್ಣಿಗೇರಿ, ಆನಂದ ಕಂಪ್ಲಿ, ಹಿರಿಯ ಮುಖಂಡರಾದ ಶಶಿಧರ ದಿಂಡೂರ, ರಾಜು ಪರಮಣ್ಣವರ, ಸುನೀಲ ಕುಂದಗೋಳ ಸೇರಿದಂತೆ ಶ್ರೀ ಕರಿಯಮ್ಮದೇವಿ ದೇವಸ್ಥಾನ ಸುಧಾರಣಾ ಸಮಿತಿ ಹಾಗೂ ಜಾತ್ರಾ ಕಮಿಟಿಯ ಸರ್ವ ಸದಸ್ಯರು, ಓಣಿಯ ಹಿರಿಯರು, ಸದ್ಭಕ್ತರು ಉಪಸ್ಥಿತರಿದ್ದರು.

# ಚಂಡಿ ಹೋಮ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಕರಿಯಮ್ಮದೇವಿ 95ನೇ ಜಾತ್ರಾ ಮಹೋತ್ಸವದ ಅಂಗವಾಗಿ ಸೋಮವಾರ ಬೆಳಿಗ್ಗೆ ಶ್ರೀ ಕರಿಯಮ್ಮದೇವಿ ದೇವಸ್ಥಾನದ ಆವರಣದಲ್ಲಿ ಚಂಡಿ ಹೋಮ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಅರ್ಚಕರಿಂದ ದೇವಿಯ ವಿವಿಧ ಬಗೆಯ ಕಾರ್ಯಕ್ರಮವನ್ನು ಶಂಕರ ಹಾನಗಲ್ಲ ಮತ್ತು ಪ್ರತಿಭಾ ಶಂಕರ ಹಾನಗಲ್ಲ ದಂಪತಿಗಳು, ವೀಣಾ ಚಂದ್ರಕಾಂತ ಹಾನಗಲ್ಲ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಜಾತ್ರಾ ಕಮಿಟಿಯ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಭಕ್ತಾಧಿಗಳು ಭಾಗವಹಿಸಿ ಶ್ರೀ ಕರಿಯಮ್ಮದೇವಿಯ ಕೃಪೆಗೆ ಪಾತ್ರರಾದರು.



## ಜಿಮ್ಸ್‌ನಲ್ಲಿ ಎಮ್‌ಬಿಬಿಎಸ್ ವಿದ್ಯಾರ್ಥಿಗಳಿಗೆ ಡಾಕ್ಟರ್ ಪದವಿ ಪ್ರದಾನ

# ಚಿಕಿತ್ಸೆಯ ಕೌಶಲ್ಯ ವೃದ್ಧಿಸಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಎಮ್‌ಬಿಬಿಎಸ್ ವಿದ್ಯಾರ್ಥಿಗಳಿಗೆ ಡಾಕ್ಟರ್ ಪದವಿ ಪ್ರದಾನ (Graduation Day) ಕಾರ್ಯಕ್ರಮ ಇತ್ತೀಚೆಗೆ ಜರುಗಿತು.

2018ರಲ್ಲಿ ಜಿಮ್ಸ್ ಕಾಲೇಜಿಗೆ ಪ್ರವೇಶ ಪಡೆದು, ಐದುವರೆ ವರ್ಷಗಳ ಕಾಲ ಅಧ್ಯಯನ ಮಾಡಿ ಕೋರ್ಸನ್ನು ಮುಗಿಸಿದ ಉನ್ನತ ಬ್ಯಾಚಿನ ವಿದ್ಯಾರ್ಥಿಗಳಿಗೆ ಡಾಕ್ಟರ್ ಪದವಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮಕ್ಕೆ ಮುಖ್ಯ ಅಥಿತಿಗಳಾಗಿ ಪದ್ಮಶ್ರೀ ಪುರಸ್ಕೃತ ಹೆಸರಾಂತ ಮನೋವೈದ್ಯ ಡಾ. ಸಿ.ಆರ್. ಚಂದ್ರಶೇಖರ ಹಾಗೂ ಡಿ.ಡಿ ಚಂದನ ವಾಹಿನಿಯ 'ಥಟ್ ಅಂತ ಹೇಳಿ' ಕ್ವಿಜ್ ಖ್ಯಾತಿಯ ಡಾ. ನಾ ಸೋಮೇಶ್ವರ ಭಾಗವಹಿಸಿದ್ದರು.

ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿದ ಡಾ. ಸಿ.ಆರ್. ಚಂದ್ರಶೇಖರ, ಭಾರತೀಯ ವೈದ್ಯರು ಪ್ರಪಂಚದಲ್ಲಿಯೇ ಶ್ರೇಷ್ಠ ವೈದ್ಯರೆಂದು ಹೆಸರು ಪಡೆದಿದ್ದಾರೆ. ಒಬ್ಬ ಶ್ರೇಷ್ಠ ವೈದ್ಯನಾಗಲು ರೋಗಿಗಳ ಜೊತೆ ಆಡು ಭಾಷೆಯಲ್ಲಿ ಮಾತನಾಡಬೇಕು. ಭಾವನೆಗಳನ್ನು ಹಾಗೂ ತೊಂದರೆಗಳನನ್ನು ಅರಿತುಕೊಳ್ಳಬೇಕು. ಚಿಕಿತ್ಸೆಯ ಕೌಶಲ್ಯವನ್ನು ವೃದ್ಧಿಸಿಕೊಳ್ಳಬೇಕು ಎಂದರು.

ಡಾ. ನಾ.ಸೋಮೇಶ್ವರ ಮಾತನಾಡಿ, 'ಅವಿನೀರ್' ಎಂಬ ಶಿರ್ಷಿಕೆಗೆ ತಕ್ಕಂತೆ, ನೂತನ ವೈದ್ಯರು ಮುಂದಿನ ಭಾರತದ ಭವಿಷ್ಯ ಹಾಗೂ ಎಲ್ಲ ವೈದ್ಯರು ಉನ್ನತ ವ್ಯಾಸಂಗ ಮಾಡಿ ಉನ್ನತ ವೈದ್ಯರಾಗಿರಿ ಎಂದು ಹಾರೈಸಿದರು.

ಜಿಮ್ಸ್ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಪಿ ಬೊಮ್ಮನಹಳ್ಳಿ ನೂತನ ವೈದ್ಯರನ್ನು ಅಭಿನಂದಿಸಿ, ಹೆಸರಾಂತ ಮುಖ್ಯ ಅಥಿತಿಗಳ ಕೈಯಲ್ಲಿ ಪದವಿ ಪಡೆದುಕೊಳ್ಳುತ್ತಿರುವುದು ನಮ್ಮ ವಿದ್ಯಾರ್ಥಿಗಳ ಅದೃಷ್ಟ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮವನ್ನು ಡಾ. ಸಮತಾ, ಡಾ. ಪ್ರಮೋದ ಹಾಗೂ ಡಾ. ಶಂಭು ನಡೆಸಿ ಕೊಟ್ಟರು. ಡಾ. ಈಶ್ವರ್ ಸಿಂಗ್.ಆರ್ 'ಹಿಪೋಕ್ರೆಟಿಸ್' ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

ಡಾ. ಮಹಾಂತೇಶ ಪಾಟೀಲ ವಂದಿಸಿದರು. ಸಮಾರಂಭದಲ್ಲಿ ಎಲ್ಲ ವೈದ್ಯಕೀಯ ವೃಂದ ಹಾಗೂ ವಿದ್ಯಾರ್ಥಿಗಳ ಪಾಲಕರು ಭಾಗವಹಿಸಿದ್ದರು.

## ಭಾರತೀಯ ರೆಡ್ ಕ್ರಾಸ್ ಭವನದಲ್ಲಿ ವಿಶ್ವ ಆರೋಗ್ಯ ದಿನಾಚರಣೆ

# ನನ್ನ ಆರೋಗ್ಯ-ನನ್ನ ಹಕ್ಕು; ಡಾ. ತುಕಾರಾಮ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ವರಿಗೂ ಸರ್ವ ಆರೋಗ್ಯ ದೊರೆಯುವಂತಾಗಬೇಕು. ಪ್ರತಿಯೊಬ್ಬ ವ್ಯಕ್ತಿಯೂ ಸದಾ ಕ್ರೀಡೆ, ದೈಹಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಆರೋಗ್ಯವಂತ ವ್ಯಕ್ತಿ ಅರಮನೆಯಲ್ಲಿರುವ ರಾಜಕುಮಾರನನ್ನೂ ನಾಚಿಸುವಂತಹ ಆರೋಗ್ಯವನ್ನು ಪಡೆಯಲು ಸಾಧ್ಯವಾಗುತ್ತದೆ ಎಂದು ನಗರದ ಖ್ಯಾತ ಚರ್ಮರೋಗ ತಜ್ಞರು ಹಾಗೂ ಕ್ರೀಡಾಪಟುಗಳಾದ ಡಾ. ತುಕಾರಾಮ ಸೂರಿ ಅಭಿಪ್ರಾಯಪಟ್ಟರು.

ಭಾರತೀಯ ರೆಡ್ ಕ್ರಾಸ್ ಭವನದಲ್ಲಿ 'ನನ್ನ ಆರೋಗ್ಯ-ನನ್ನ ಹಕ್ಕು' ಎಂಬ ಧ್ಯೇಯ ವಾಕ್ಯದೊಂದಿಗೆ ಹಮ್ಮಿಕೊಂಡಿದ್ದ ವಿಶ್ವ




ಆರೋಗ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಅಂತಾರಾಷ್ಟ್ರೀಯ ವಾಲಿಬಾಲ್ ಕ್ರೀಡಾಪಟು ಮಾಲತಿ ಇನಾಮತಿ ಮಾತನಾಡುತ್ತಾ, ಯಾವುದೇ ಒಬ್ಬ ವ್ಯಕ್ತಿ ದೈಹಿಕವಾಗಿ ಅಸಮರ್ಥರಾಗಿದ್ದರೂ ಮನೋಸಾಮರ್ಥ್ಯ ಅತ್ಯುತ್ತಮವಾಗಿದ್ದರೆ ಯಾವುದೇ ಸಾಧನೆಯನ್ನು ಸುಲಭವಾಗಿ ಸಾಧಿಸಬಹುದು ಎಂದರು.

ಸಂಸ್ಥೆಯ ಸದಸ್ಯರಾದ ಸಂಜಯ ಬಾಗಮಾರ ಹಾಗೂ ಇಂದಿರಾ ಬಾಗಮಾರ ದಂಪತಿಗಳು, ಡಾ. ಡಿಂಪಲ್ ಬಾಗಮಾರ ಅವರು ಸಂಸ್ಥೆಗೆ ಎಲೆಕ್ಟ್ರಾನಿಕ್ ಗಡಿಯಾರವನ್ನು ಕೊಡುಗೆಯಾಗಿ ನೀಡಿದರು. 10 ಜನ ಫಲಾನುಭವಿಗಳಿಗೆ ರೆಡ್ ಕ್ರಾಸ್ ವತಿಯಿಂದ ಹೈಜೆನಿಕ್ ಕಿಟ್ ವಿತರಿಸಲಾಯಿತು.

ವೇದಿಕೆಯ ಮೇಲೆ ಉಪಸಭಾಪತಿ ನಾರಾಯಣಪ್ಪ ಇಲ್ಲೂರ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಹಿರಿಯ ಸದಸ್ಯರಾದ ಡಾ. ಚಾರುಮತಿ ಗೊಡಬೋಲೆ, ದ್ರಾಕ್ಷಾಯಿಣಿ ಮೂರಶಿಳ್ಳಿನ, ದಿನೇಶ ಜೈನ್ ಹಾಜರಿದ್ದರು. ಸಂಸ್ಥೆಯ ಗೌರವ ಖಜಾಂಜಿ ಪ್ರೊ. ಕೆ.ಎಚ್. ಬೇಲೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ನಿಶ್ಚಿತಾ ಬಿ.ಎಲ್ ಪ್ರಾರ್ಥಿಸಿದರು. ದಾನೇಶ್ವರಿ ಕೊಕ್ಕಳಕಿ ಹಾಗೂ ರುದ್ರಪ್ಪ ಕರಡಿ ಪರಿಚಯಿಸಿದರು. ಪ್ರಕಾಶ ಗಾಣಿಗೇರ ನಿರೂಪಿಸಿದರು. ವಾಗ್ದೇವಿ ಕುಲಕರ್ಣಿ ವಂದಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಸಂಸ್ಥೆಯ ಸಭಾಪತಿ ಡಾ. ಆರ್. ಎನ್. ಗೋಡಬೋಲೆ ಮಾತನಾಡಿ, ಆರೋಗ್ಯವನ್ನು ಸಧೃಡವಾಗಿಟ್ಟುಕೊಂಡರೆ, ಎಂತಹ ಕಷ್ಟದ ಕೆಲಸವನ್ನು ಸರಾಗವಾಗಿ ನಿರ್ವಹಿಸಬಹುದು. ಇಂದಿನ ಯುವಕರು ನಿರಾಶಾಭಾವನೆಯಿಂದ ಹಿಂಜರಿಯದೇ ಸದಾ ಕ್ರಿಯಾಶೀಲರಾಗಿ ಪ್ರತಿಯೊಂದು ಚಟುವಟಿಕೆಗಳಲ್ಲಿ ಭಾಗಿಯಾಗಬೇಕು. ಸದೃಢ ನಾಗರಿಕರಾದರೆ ದೇಶ ಸದೃಢವಾಗಲು ಸಾಧ್ಯವಾಗುತ್ತದೆ ಎಂದು ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka